# ಬೆಳಗಾವಿ ವಾರ್ತೆ

ಕನ್ನಡ ದಿನ ಪತ್ರಿಕೆ, ಬೆಳಗಾವಿ

ಸಂಪಾದಕರು: ಮಹೇಶ್ವರಿ ಭೀಮಶಿ ಭರಮಣ್ಣವರ
EDITOR: MAHESHWARI BHIMASHI BHARAMANNAVARA

BELAGAVI VARTE
KANNADA DAILY MORNING BELAGAVI

G-mail: belagavivarte1@gmail.com
epaper. belagavivarte.com
Regd No : G2/PMG/KA/NK/BM/157/26-28

Volume: 01 Issue : 89 THURSDAY 11-06-2026 PRGI No : KNKAN/26/A0962 Pages:4 Rs.2.00 M: 9742418836

## 'ಮೋದಿ ಅವರೊಂದಿಗೆ ನನ್ನ ಸಂಬಂಧ ರಾಜ್ಯಸಭೆ ಸ್ಥಾನಕ್ಕೆ ಸೀಮಿತ ಅಲ್ಲ, ಅವರ ಮಟ್ಟಕ್ಕೆ ಬೆಳೆದಿರುವ ಮತ್ತೊಬ್ಬ ನಾಯಕ ಇಂದು ಇಲ್ಲ': HD ದೇವೇಗೌಡ



ಬೆಂಗಳೂರು: ಜೂನ್ 25ರಂದು ತಮ್ಮ ರಾಜ್ಯಸಭಾ ಅವಧಿ ಪೂರ್ಣಗೊಳ್ಳಲಿರುವ ಮಾಜಿ ಪ್ರಧಾನಿ ಹೆಚ್ ಡಿ ದೇವೇಗೌಡ ಅವರು, ಪ್ರಧಾನಿ ನರೇಂದ್ರ ಮೋದಿ ಅವರೊಂದಿಗಿನ ತಮ್ಮ ಸಂಬಂಧವು ರಾಜ್ಯಸಭೆ ಸ್ಥಾನಕ್ಕೆ ಸಂಬಂಧಪಟ್ಟದ್ದಲ್ಲ, ಕಳೆದ ಹತ್ತು ವರ್ಷಗಳಲ್ಲಿ ಬೆಳೆದ ವೈಯಕ್ತಿಕ ಬಾಂಧವ್ಯದ ಆಧಾರದ ಮೇಲಿರುವುದಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ. ಅಲ್ಲದೆ, ತಮ್ಮ ಮರುನಾಮನಿರ್ದೇಶನಕ್ಕಾಗಿ ತಾವು ಯಾವುದೇ ಮನವಿ ಮಾಡಿಲ್ಲ ಎಂದೂ ತಿಳಿಸಿದ್ದಾರೆ.

2014ರಿಂದ ನಾನು ಮೋದಿ ಅವರೊಂದಿಗೆ ಉತ್ತಮ ಸಂಬಂಧ ಬೆಳೆಸಿಕೊಂಡಿದ್ದೇನೆ. ಗುಜರಾತ್ ಮುಖ್ಯಮಂತ್ರಿಯಾಗಿದ್ದ ಸಂದರ್ಭದಲ್ಲಿ ಗೋಧ್ರಾ ಘಟನೆಯ ವಿಚಾರದಲ್ಲಿ ನಾನು ಮತ್ತು ಆಂಧ್ರಪ್ರದೇಶ ಮುಖ್ಯಮಂತ್ರಿ ಎನ್ ಚಂದ್ರಬಾಬು ನಾಯ್ಡು ಮೋದಿ ಅವರನ್ನು ಟೀಕಿಸಿದ್ದೆವು. ಆದರೆ ಒಂದು ರಾಜ್ಯಸಭೆ ಸ್ಥಾನಕ್ಕಾಗಿ ಪ್ರಧಾನಿಯವರೊಂದಿಗಿನ ನನ್ನ ಸಂಬಂಧ ಕೊನೆಗೊಳ್ಳುವುದಿಲ್ಲ ಎಂದು ಆರು ದಶಕಗಳಿಗೂ ಹೆಚ್ಚು ಕಾಲ ರಾಜಕೀಯದಲ್ಲಿ ಸಕ್ರಿಯರಾಗಿರುವ ದೇವೇಗೌಡ ಹೇಳಿದ್ದಾರೆ.

ತಾವು ರಾಜ್ಯಸಭಾ ಸದಸ್ಯನಾಗಿರುವುದಿಲ್ಲ ಎಂಬ ಕಾರಣಕ್ಕೆ ಇನ್ನು ಮುಂದೆ ಪ್ರಧಾನಿ ನರೇಂದ್ರ ಮೋದಿ ಅವರೊಂದಿಗಿನ ತಮ್ಮ ಸಂಬಂಧಕ್ಕೆ ಯಾವುದೇ ಧಕ್ಕೆಯಾಗುವುದಿಲ್ಲ ಎಂದು ಅವರು ಹೇಳಿದ್ದಾರೆ.

ಕಾಂಗ್ರೆಸ್ ಪಕ್ಷಕ್ಕೆ ಪರೋಕ್ಷವಾಗಿ ತಿರುಗೇಟು ನೀಡಿದ ದೇವೇಗೌಡ, ಒಂದು ರಾಜ್ಯಸಭೆ ಸ್ಥಾನಕ್ಕಾಗಿ ತಮ್ಮ ಮತ್ತು ಮೋದಿ ನಡುವಿನ ಸಂಬಂಧ ಹದಗೆಡುತ್ತದೆ ಎಂದು ಕಾಂಗ್ರೆಸ್ ಭಾವಿಸಿದ್ದರೆ ಅದು ತಪ್ಪು ಕಲ್ಪನೆ, ಎಂದರು.

ದೇಶದಲ್ಲಷ್ಟೇ ಅಲ್ಲ, ವಿದೇಶಗಳಲ್ಲಿಯೂ ಮೋದಿ ಅವರ ನಾಯಕತ್ವಕ್ಕೆ ಅಪಾರ ಗೌರವವಿದೆ ಎಂದು ಅವರು ಅಭಿಪ್ರಾಯಪಟ್ಟರು.

### 10 ವರ್ಷಗಳಲ್ಲಿ ನಮ್ಮ ಸಂಬಂಧ ಗಟ್ಟಿಯಾಗಿದೆ

ಕಳೆದ ಹತ್ತು ವರ್ಷಗಳಲ್ಲಿ ಮೋದಿ ಅವರೊಂದಿಗಿನ ನನ್ನ ಸಂಬಂಧವು ಕೇವಲ ಒಂದು ರಾಜ್ಯಸಭೆ ಸ್ಥಾನಕ್ಕಾಗಿ ಬೆಳೆದದ್ದಲ್ಲ. ಅದು ನಮ್ಮಿಬ್ಬರ ನಡುವಿನ ವೈಯಕ್ತಿಕ ಬಾಂಧವ್ಯವಾಗಿದೆ. ನಾನು ರಾಜ್ಯಸಭೆಯ ಸದಸ್ಯನಾಗಿರದಿದ್ದರೂ ಆ ಸಂಬಂಧ ಮುಂದುವರಿಯುತ್ತದೆ ಎಂದು ದೇವೇಗೌಡ ಹೇಳಿದರು.

ಈ ದೇಶದಲ್ಲಿ ಯಾವುದೇ ಸಂದರ್ಭ ಬಂದರೂ, ಮೋದಿ ಅಥವಾ ಅವರ ಆಡಳಿತದ ಬಗ್ಗೆ ನನ್ನ ಭಾವನೆಗಳನ್ನು ನಾನು ನಿರ್ಭಯವಾಗಿ ವ್ಯಕ್ತಪಡಿಸಿದ್ದೇನೆ. ಕುಮಾರಸ್ವಾಮಿ ಅವರ ಸರ್ಕಾರ ಇಲ್ಲಿ ಪತನಗೊಂಡಾಗ ಬಿಜೆಪಿಯೊಂದಿಗೆ ಕೈಜೋಡಿಸಬೇಕು ಎಂದು ನಾನು ಹೇಳಿದ್ದೆ. ಇದು ಯಾರಿಗೂ ಗೊತ್ತಿಲ್ಲದ ವಿಷಯವಲ್ಲ ಎಂದರು.

ಎಲ್ಲ ಸಂದರ್ಭಗಳಲ್ಲಿಯೂ ನಾನು ಮೋದಿ ಅವರೊಂದಿಗೆ ನಿಂತಿದ್ದೇನೆ. ಕಳೆದ ಹತ್ತು ವರ್ಷಗಳಲ್ಲಿ ದೇಶದ ಸರ್ವಾಂಗೀಣ ಅಭಿವೃದ್ಧಿಗಾಗಿ ಅವರು ಮಾಡಿದ ಕೆಲಸಗಳನ್ನು ನಾನು ಬೆಂಬಲಿಸಿದ್ದೇನೆ ಎಂದು ಅವರು ಹೇಳಿದರು.

ಭಾರತವು 145 ಕೋಟಿ ಜನಸಂಖ್ಯೆಯ ವಿಶಾಲ ರಾಷ್ಟ್ರ. ನೇರವಾಗಿ ಹೇಳುವುದಾದರೆ, ಇಂಡಿಯಾ ಮೈತ್ರಿಕೂಟದಲ್ಲಿ ಮೋದಿ ಅವರಿಗೆ ಸಮಾನವಾಗಿ ಸ್ಪರ್ಧಿಸಬಲ್ಲ ಮತ್ತೊಬ್ಬ ನಾಯಕ ನನಗೆ ಕಾಣುತ್ತಿಲ್ಲ ಎಂದು ದೇವೇಗೌಡ ಅಭಿಪ್ರಾಯಪಟ್ಟರು.

ದೇಶದ ಒಟ್ಟಾರೆ ಅಭಿವೃದ್ಧಿಯ ಜೊತೆಗೆ ಭಾರತವನ್ನು 5 ಟ್ರಿಲಿಯನ್ ಡಾಲರ್ ಆರ್ಥಿಕತೆಯತ್ತ ಕೊಂಡೊಯ್ಯುವ ಗುರಿಯನ್ನು ಅವರು ಇಟ್ಟಿದ್ದಾರೆ. ನಮ್ಮ ರಕ್ಷಣಾ ಸಾಮರ್ಥ್ಯವೂ ಬಹಳಷ್ಟು ಹೆಚ್ಚಾಗಿದೆ. ಇಂತಹ ಅನೇಕ ಸಾಧನೆಗಳನ್ನು ಹೇಳಬಹುದು ಎಂದರು.

ಇಂದು ಮೋದಿ ಅವರು ಅಂತಾರಾಷ್ಟ್ರೀಯ ಮಟ್ಟದಲ್ಲಿ ಗುರುತಿಸಿಕೊಂಡ ನಾಯಕರಾಗಿದ್ದಾರೆ. ದೇಶದಲ್ಲಷ್ಟೇ ಅಲ್ಲ, ಜಾಗತಿಕ ಮಟ್ಟದಲ್ಲಿಯೂ ಅವರಿಗೆ ವಿಶೇಷ ಸ್ಥಾನವಿದೆ. ಆ ಮಟ್ಟಕ್ಕೆ ಬೆಳೆದಿರುವ ಮತ್ತೊಬ್ಬ ನಾಯಕ ಇಲ್ಲ ಎಂದು ಅವರು ಪ್ರಧಾನಿ ಮೋದಿ ಅವರನ್ನು ಶ್ಲಾಘಿಸಿದರು.

## ಹಿಡ್ಕಲ್ ಜಲಾಶಯದಿಂದ ಘಟಪ್ರಭಾ ಕಾಲುವೆಗೆ ನೀರನ್ನು ಬಿಡುಗಡೆ–ಬಾಲಚಂದ್ರ ಜಾರಕಿಹೊಳಿ



**ಬೆಳಗಾವಿ ವಾರ್ತೆ ಗೋಕಾಕ:** ಜನ ಹಾಗೂ ಜಾನುವಾರು ಗಳಿಗೆ ಕುಡಿಯುವ ನೀರಿನ ಉದ್ದೇಶಕ್ಕಾಗಿ ಹಿಡಕಲ್ ಜಲಾಶಯದಿಂದ ಘಟಪ್ರಭಾ ಬಲದಂಡೆ ಕಾಲುವೆಗೆ ಇಂದಿನಿಂದ (ಜೂನ್ 10 ರಂದು ಸಂಜೆ 6.00 ಗಂಟೆಯಿಂದ ) ಸಚಿವ ಸತೀಶ್ ಜಾರಕಿ ಹೊಳಿಯವರ ಸೂಚನೆಯಂತೆ ನೀರನ್ನು ಹರಿಸಲಾಗುತ್ತಿದೆ ಎಂದು ಅರಭಾವಿ ಶಾಸಕ ಹಾಗೂ ಬೆಮುಲ್ ಅಧ್ಯಕ್ಷ ಬಾಲಚಂದ್ರ ಜಾರಕಿಹೊಳಿಯವರು ಹೇಳಿದ್ದಾರೆ.

ತೀವ್ರ ಬರ ಮತ್ತು ಬಿಸಿಲಿನ ಪ್ರಖರತೆ ಹೆಚ್ಚಾಗುತ್ತಿರುವುದರಿಂದ ಜನ ಮತ್ತು ಜಾನುವಾರುಗಳಿಗೆ ನೀರಿಲ್ಲದೇ ತೊಂದರೆಯಾಗುತ್ತಿದೆ. ಈ ಹಿನ್ನೆಲೆಯಲ್ಲಿ ಹಿಡ್ಕಲ್ ಜಲಾಶಯದಿಂದ ಘಟಪ್ರಭಾ ಬಲದಂಡೆ ಕಾಲುವೆಗೆ 1 ಟಿಎಂಸಿ ನೀರನ್ನು ಬಿಡುಗಡೆ ಮಾಡಲಾಗುತ್ತದೆ.

ಜನ ಮತ್ತು ಜಾನುವಾರುಗಳಿಗೆ ನೀರನ್ನು ಹರಿಸುವಂತೆ ಸಚಿವ ಸತೀಶ್ ಜಾರಕಿಹೊಳಿ ಹಾಗೂ ಬೆಳಗಾವಿ ಪ್ರಾದೇಶಿಕ ಆಯುಕ್ತರಿಗೆ ಕೋರಿಕೆಯನ್ನು ಮಾಡಿದ್ದರಿಂದ ಸಾರ್ವಜನಿಕ ಹಿತದೃಷ್ಟಿಯಿಂದ ಹಿಡ್ಕಲ್ ಜಲಾಶಯದಿಂದ ಘಟಪ್ರಭಾ ಕಾಲುವೆಗೆ ನೀರನ್ನು ಬಿಡುಗಡೆ ಮಾಡಲಾಗಲು ಕ್ರಮ ಕೈಗೊಂಡಿದ್ದಾರೆ.

ಘಟಪ್ರಭಾ ಬಲದಂಡೆ ಕಾಲುವೆಯ ದುರಸ್ತಿ ಕಾಮಗಾರಿಯು ನಡೆಯುತ್ತಿದ್ದರಿಂದ ಕಳೆದ ಸಲ ನೀರನ್ನು ಬಿಡಲಾಗಿಲ್ಲ. ಈಗ ಕಾಲುವೆಯು ಕಾಮಗಾರಿಯು ಪೂರ್ತಿಯಾಗಿದ್ದರಿಂದ ನೀರನ್ನು ಹರಿಸಲಾಗುತ್ತಿದೆ. ಕಾಲುವೆ ವ್ಯಾಪ್ತಿಯಲ್ಲಿನ ಕೆಲವು ಪ್ರದೇಶಗಳಿಗೆ ಮಳೆಯಾಗಿದ್ದು, ಇನ್ನೂ ಕೆಲ ವೆಡೆ ಮಳೆಯಾಗಿರುವುದಿಲ್ಲ. ಆದ್ದರಿಂದ

ಹಿಡ್ಕಲ್ ಜಲಾಶಯದಿಂದ ಹರಿಸಲಾಗುತ್ತಿರುವ ನೀರು ಕೇವಲ ಜನ ಮತ್ತು ಜಾನುವಾರುಗಳಿಗೆ ಕುಡಿಯುವ ಉದ್ದೇಶಕ್ಕಾಗಿ ಮಾತ್ರ. ಇದನ್ನು ಸದುಪಯೋಗ ಪಡಿಸಿಕೊಳ್ಳುವಂತೆ

ಶಾಸಕ ಬಾಲಚಂದ್ರ ಜಾರಕಿಹೊಳಿಯವರು ಸಾರ್ವಜನಿಕರಲ್ಲಿ ಮನವಿಯನ್ನು ಮಾಡಿಕೊಂಡಿದ್ದಾರೆ.

ಸಾರ್ವಜನಿಕರು ಮತ್ತು ಜಾನುವಾರಗಳ ಹಿತದೃಷ್ಟಿಯಿಂದ ಘಟಪ್ರಭಾ ಬಲದಂಡೆ ಕಾಲುವೆಗೆ ನೀರು ಹರಿಸಲು ಕ್ರಮ ಕೈಗೊಂಡಿರುವ ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಮತ್ತು ಬೆಳಗಾವಿ ಪ್ರಾದೇಶಿಕ ಆಯುಕ್ತರಿಗೆ ಶಾಸಕ ಬಾಲಚಂದ್ರ ಜಾರಕಿಹೊಳಿಯವರು ಕೃತಜ್ಞತೆಯನ್ನು ಅರ್ಪಿಸಿದ್ದಾರೆ.

## ಕೆಸಿಟಿ ಪರೀಕ್ಷೆಯಲ್ಲಿ ಉತ್ತಮ ಸಾಧನೆ



**ಬೆಳಗಾವಿ ವಾರ್ತೆ ಗೋಕಾಕ:** ನಗರದ ಕೆಎಲ್ಇ ಸಂಸ್ಥೆಯ ಸಿ ಎಸ್ ಅಂಗಡಿ ಪಿಯೂ ಕಾಲೇಜಿನ ದ್ವಿತೀಯ ವರ್ಷದ 22 ವಿದ್ಯಾರ್ಥಿಗಳು ಕೆಸಿಟಿ ಪರೀಕ್ಷೆಯಲ್ಲಿ ಉತ್ತಮ ಸಾಧನೆ ಮಾಡಿ ಕಾಲೇಜಿನ ಕೀರ್ತಿಯನ್ನು ಹೆಚ್ಚಿಸಿದ್ದಾರೆ.

ನಾಗರಾಜ ಕೊಳವಿ, ಸಂದೀಪ ಪಣಗುತ್ತಿ, ಶ್ರೇಯಸ ಸಣ್ಣಕ್ಕಿ, ರೇಣುಕಾ ಭಂಡಾರಿ, ಬೀರಪ್ಪ ಭಂಡಿ, ಹರೀಶ ಉದಗಟ್ಟಿ, ಲಕ್ಷ್ಮೀ ಬುದಿಗೊಪ್ಪ, ನಂದಿತಾ ಪತ್ತಾರ, ಲಕ್ಷ್ಮೀ ಅರಬಳ್ಳಿ, ರಂಜನಿ ಗುಗ್ಗಳಿ, ಸಂತೋಷ ಕಿರಗಿ, ಪ್ರಿಯಾಂಕಾ ಖಿಲಾರಿ, ಸಂಜೀವಿನಿ ಶಿವಾಪೂರ, ನಿಸರ್ಗಾ ಚೌಕಾಶಿ, ಉಮಾಶ್ರೀ ಅರಭಾಂವಿ, ಲಕ್ಷ್ಮೀ ಬೆಳವಿ, ನಂದಿನಿ ಹೊಸಮನಿ ವಿದ್ಯಾರ್ಥಿಗಳು ಇಂಜನಿಯರಿಂಗ, ಬಿಎಸ್‌ಸಿ ಅಗ್ರಿ, ಬಿಎನ್‌ವೈಎಸ್ ಹಾಗೂ ವೇಟರ್ನರಿಯಲ್ಲಿ ರ್‍ಯಾಂಕ ಪಡೆದಿದ್ದಾರೆ. ಪ್ರಜಕ್ತಾ ಜಾಧವ, ಸಂಜನಾ ಚೌಗಲಾ, ಲಕ್ಷ್ಮೀ ಗುಡ್ಡದಮನಿ, ಚೈತ್ರಾ ಕುಲಕರ್ಣಿ ಈ ವಿದ್ಯಾರ್ಥಿಗಳು ಇಂಜನಿಯರಿಂಗನಲ್ಲಿ ರ್‍ಯಾಂಕ ಪಡೆದಿದ್ದಾರೆ.

ವಿದ್ಯಾರ್ಥಿಗಳ ಈ ಸಾಧನೆಯನ್ನು ಪದ್ಮಶ್ರೀ ಡಾ.ಪ್ರಭಾಕರ ಕೋರೆ, ಚೇರಮನ ಅಮೀತ ಕೋರೆ, ನಿರ್ದೇಶಕ ಜಯಾನಂದ ಮುನವಳ್ಳಿ, ಸ್ಥಳೀಯ ಆಡಳಿತ ಮಂಡಳಿಯ ಚೇರಮನ ಎಮ್ ಡಿ ಚುನಮರಿ, ಆಡಳಿತಾಧಿಕಾರಿ ಜಿ ಎಮ್ ಅಂದಾನಿ, ಪ್ರಾಚಾರ್ಯರಾದ ಎಮ್ ಎನ್ ಕೌಜಲಗಿ, ಎಮ್ ಎ ಪಾಟೀಲ, ಅಮೃತ ಜಕ್ಕಲಿ, ಉಪನ್ಯಾಸಕರು ಮತ್ತು ಸಿಬ್ಬಂಧಿ ಅಭಿನಂಧಿಸಿದ್ದಾರೆ.

## ಸ್ವಾರ್ಥವಿಲ್ಲದೆ ಸಾರ್ಥಕ ಸೇವೆ ಮಾಡಿದ ಹಂಚಿನಾಳ ಶಿಕ್ಷಕ– ಮುರುಘರಾಜೇಂದ್ರ ಸ್ವಾಮೀಜಿ

**ಬೆಳಗಾವಿ ವಾರ್ತೆ ಗೋಕಾಕ:** ಸ್ವಾರ್ಥವಿಲ್ಲದೆ ಸಾರ್ಥಕ ಸೇವೆ ಮಾಡಿದ ಹಂಚಿನಾಳ ಶಿಕ್ಷಕರು ಶಿಕ್ಷಣ ಇಲಾಖೆಯಲ್ಲಿ ಕಳೆದ 30 ವರ್ಷಗಳ ಕಾಲ ಸುದೀರ್ಘ ಸೇವೆ ಮಾಡಿ ನಿವೃತ್ತ ಹೊಂದಿರುವ ಅವರಿಗೆ ನಿವೃತ್ತ ಜೀವನ ಸುಖಮಯವಾಗಲಿ ಎಂದು ಶುಭ ಹಾರೈಸಿದರು. ಅವರು ತಾಲೂಕಿನ ಶಿಂದಿಕುರಬೇಟ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಕನ್ನಡ ಹೆಣ್ಣು ಮಕ್ಕಳ ಶಾಲೆಯಲ್ಲಿ ಹಮ್ಮಿಕೊಂಡಿದ್ದ ಶ್ರೀಕಾಂತ ಹಂಚಿನಾಳ ಅವರ ನಿವೃತ್ತ ಪ್ರಯುಕ್ತ ಬೀಳ್ಕೊಡುಗೆ ಸಮಾರಂಭ ಹಾಗೂ ಶಾಲೆಗೆ ರಾಜ್ಯ ಮಟ್ಟದ ಪ್ರಶಸ್ತಿ ಪಡೆದ ಪ್ರಯುಕ್ತ ಅಭಿನಂದನಾ ಸಮಾರಂಭದ ದಿವ್ಯ ಸಾನಿಧ್ಯ ವಹಿಸಿ ಮಾತನಾಡಿದರು.

ತಾಲೂಕಿನ ನಲ್ಲಾನಟ್ಟಿ, ಘಟಪ್ರಭಾ, ಶಿಂದಿಕುರಬೇಟ ಗ್ರಾಮಗಳಲ್ಲಿ ಶಿಕ್ಷಕರಾಗಿ, ಪ್ರಧಾನ ಗುರುಗಳಾಗಿ ಸೇವೆ ಸಲ್ಲಿಸಿದ ಅವರು ಗ್ರಾಮಸ್ಥರ, ಸಂಘ ಸಂಸ್ಥೆಗಳ ಪದಾಧಿಕಾರಿಗಳ ಮತ್ತು ಶಿಕ್ಷಕರ ಹಾಗೂ ವಿದ್ಯಾರ್ಥಿಗಳ ಪ್ರೀತಿ ವಿಶ್ವಾಸಕ್ಕೆ



ಪಾತ್ರರಾಗಿದ್ದರೆ, ಜನರ ಮೆಚ್ಚುಗೆಯನ್ನು ಗಳಿಸಿದ್ದಾರಲ್ಲದೇ ನಮ್ಮ ಶ್ರೀಮಠದ ಭಕ್ತರಾಗಿದ್ದಾರೆ ಎಂದು ಹೇಳಿದರು. ಮೂಡಲಗಿ ಶಿಕ್ಷಕರ ಸಂಘದ ಅಧ್ಯಕ್ಷ ಎಂ.ಜಿ.ಮಾವಿನಗಿಡದ ಮಾತನಾಡಿ ಶಿಕ್ಷಕರಾಗಿ ಮತ್ತು ಶಿಕ್ಷಕರ ಸಂಘ ದಲ್ಲಿ ಸಕ್ರೀಯವಾಗಿ ಸೇವೆ ಮಾಡಿದ್ದಾರೆ. ಎಲ್ಲರೊಂದಿಗೆ ನಗುನಗುತ್ತಲೇ ಸದಾ ಇರುವ ಶ್ರೀಕಾಂತ ಹಂಚಿನಾಳ ಸರ್ ಅವರು ದಕ್ಷ ಮತ್ತು ಪ್ರಾಮಾಣಿಕ ಶಿಕ್ಷಕರಾಗಿದ್ದರು ಎಂದು ಹೇಳಿದರು.

ಶಾಲೆಯ ಪ್ರಭಾರ ಪ್ರಧಾನ ಗುರು ಆರ್.ಎಚ್.ತುಳಸಿಗೇರಿ ಮಾತನಾಡಿ ಹಂಚಿನಾಳ ಶಿಕ್ಷಕರು ಧೈರ್ಯ ಶಾಲಿಗಳು ಹಾಗೂ ಶಿಕ್ಷಕರೊಂದಿಗೆ ಉತ್ತಮ ಒಡನಾಟ ಹೊಂದಿದ್ದರು. ಕ್ರೀಡೆ, ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಆಯೋಜನೆ ಮಾಡುವ ಮೂಲಕ ವಿದ್ಯಾರ್ಥಿಗಳ ಮನಸ್ಸನ್ನು ಗೆದ್ದಿದ್ದಾರೆ. ಶಾಲೆಯ ಅಭಿವೃದ್ಧಿಗೆ ಹೆಚ್ಚಿನ ಒತ್ತು ನೀಡಿದ್ದಾರೆ ಎಂದು ಹೇಳಿದರು.

ವೇದಿಕೆ ಮೇಲೆ ಪ್ರಭಾ ಶುಗರ್ಸ್ ನಿರ್ದೇಶಕ ಆರೀಫ್ ಪೀರಜಾದೆ,ಎಸ್.ಡಿ.ಎಂ.ಸಿ ಅಧ್ಯಕ್ಷರುಗಳಾದ ದಯಾನಂದ ಕಳಸನ್ನವರ, ಶ್ರೀಧರ ಕಂಬಾರ, ಸಿಆರ್‌ಪಿ ಸುಭಾಸ ಪಾಟೀಲ, ಎಸ್.ಬಿ.ಬಡಿಗೇರ,ಸಿ.ಎಂ.ಬಾವಿಮನಿ, ಜಿ.ಎಸ್.ಗೋಡೇರ,ಬಿ.ಎಸ್.ಮುಗಳಿ, ಕಿರಣ ಕೋಳಿ, ಗುರು ಕಡೇಲಿ, ನಿಂಗಪ್ಪ ಬಂಬಲಾಡಿ, ಜ್ಯೋತೆಪ್ಪ ಟಬಂತಿ, ಮಾರುತಿ ಜಾಧವ್, ಸಿದ್ಧಾರೂಢ ಕಂಬಾರ, ಪಿಡಿಒ ಸಾಯಿಶ್ವರಿ ಮೆಣಸಿನಕಾಯಿ, ದುರುಗಪ್ಪ ಬಂಡಿವಡ್ಡರ, ಶೇಖರ್ ಮಾನೆ, ಮಹಾಲಿಂಗಪ್ಪ ತಳಗೇರಿ, ಶಂಕರ ಕಟ್ಟಿಮನಿ, ಅಶೋಕ ಮೇತ್ರಿ, ನಾರಾಯಣ ಕದಮ, ಬಸವರಾಜ ಗೋಕಾಕ, ಎಡವೀನ್ ಪರಸನ್ನವರ, ಎಸ್.ಎಂ. ದಬಾಡಿ, ಆಸೀಫ್ ಪಟಾಣ, ವಿಠ್ಠಲ ಕರೋಶಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು. ಕಾರ್ಯಕ್ರಮವನ್ನು ಎ.ಎಸ್. ಸವದತ್ತಿ ಸ್ವಾಗತಿಸಿದರು. ಶ್ರೀಯಾ ಬಂಬಲಾಡಿ ನಿರೂಪಿಸಿದರು. ಪೂಜಾ ಮಲ್ಲಾಪುರ ವಂದಿಸಿದರು

## ಸಾರ್ವಜನಿಕರ ಗಮನಕ್ಕೆ

**ಬೆಳಗಾವಿ ವಾರ್ತೆ ಗದಗ:** ಸಾರಿಗೆ ಇಲಾಖೆಯಲ್ಲಿ 01–04–1991 ರಿಂದ 31–03–2022 ರ ಅವಧಿಯಲ್ಲಿ ದಾಖಲಾಗಿ ಪಾವತಿಗೆ ಬಾಕಿಯಿರುವ ಪ್ರಕರಣಗಳ ದಂಡದ ಮೊತ್ತದಲ್ಲಿ ಶೇಕಡಾ 50% (ಐವತ್ತರಷ್ಟು ಮಾತ್ರ) ರಿಯಾಯಿತಿ ನೀಡಿ, ಜೂನ್ 21 ರಿಂದ ಜುಲೈ 10 ರವರೆಗೆ ಕಾಲಾವಕಾಶ ನೀಡಿದ್ದು.

ಅದರಂತೆ ಸಾರ್ವಜನಿಕರಿಂದ ಬಾಕಿಯಿರುವ ಡಿ.ಎಸ್.ಎ ಪ್ರಕರಣಗಳ ದಂಡದ ಮೊತ್ತದಲ್ಲಿ ಶೇಕಡಾ 50 ರಷ್ಟು ರಿಯಾಯಿತಿ ಪಡೆದುಕೊಳ್ಳಬೇಕೆಂದು ಪ್ರಾದೇಶಿಕ ಸಾರಿಗೆ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅವಿರೋಧ ಆಯ್ಕೆ

**ಬೆಳಗಾವಿ ವಾರ್ತೆ ಗೋಕಾಕ:** ಕರ್ನಾಟಕ ರಾಜ್ಯ ಬಣಜಿಗ ಸಮಾಜದ ಕ್ಷೇಮಾಭಿವೃದ್ಧಿ ಸಂಘದ ರಾಜ್ಯಾಧ್ಯಕ್ಷ ಮಲ್ಲಿಕಾರ್ಜುನ ಗುರುಬಸಪ್ಪ ರೂಢಗಿ ಯವರ ಅಧ್ಯಕ್ಷತೆಯಲ್ಲಿ ನಡೆದ ಬೆಳಗಾವಿ ಜಿಲ್ಲಾಧ್ಯಕ್ಷರ ಆಯ್ಕೆ ಸಭೆಯಲ್ಲಿ ಗೋಕಾಕ ನಗರದ ಯುವಕ ಗಿರೀಶ ಅಶೋಕ ಉದೋಶಿಯವರನ್ನು ಜಿಲ್ಲಾಧ್ಯಕ್ಷರನ್ನಾಗಿ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.



## ಆರ್ ಬಿ ತಿಮ್ಮಾಪುರ ಅವರಿಗೆ ಮಂತ್ರಿ ಸ್ಥಾನ ನೀಡಲು ಆಗ್ರಹ



**ಬೆಳಗಾವಿ ವಾರ್ತೆ ಮೋಳೆ:** ಉತ್ತರ ಕರ್ನಾಟಕದ ಪ್ರಭಾವಿ ಹಿರಿಯ ರಾಜಕಾರಣಿ, ದಲಿತ ಸಮುದಾಯದ ನಾಯಕ ಆರ್ ಬಿ ತಿಮ್ಮಾಪುರ ಅವರಿಗೆ ಸಚಿವ ಸ್ಥಾನ ನೀಡಬೇಕು ಎಂದು ಕೆಪಿಸಿಸಿ ಪರಿಶಿಷ್ಟ ಜಾತಿ ರಾಜ್ಯ ಮಾಧ್ಯಮ ವಕ್ತಾರ ರಾವಸಾಬ ಐಹೊಳೆ ಹಾಗೂ ತಾಲೂಕ ಮಾದಿಗ ಮೀಸಲಾತಿ ಹೋರಾಟ ಸಮಿತಿಯ ಮುಖಂಡರು ಸಿಎಂ ಡಿ. ಕೆ ಶಿವಕುಮಾರ ಹಾಗೂ ಪಕ್ಷದ ವರಿಷ್ಠರಿಗೆ ಒತ್ತಾಯ ಮಾಡಿದ್ದಾರೆ.

ಅವರು ಅಥಣಿ ಪಟ್ಟಣದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿ ಆರ್ ಬಿ ತಿಮ್ಮಾಪುರ ಅವರು ಉತ್ತರ ಕರ್ನಾಟಕದ ಹಿರಿಯ ಶಾಸಕರಾಗಿ ಅನೇಕ ಬಾರಿ ಸಚಿವರಾಗಿ ಸೇವೆ ಸಲ್ಲಿಸಿದ ಅನುಭವ ಹೊಂದಿದ್ದಾರೆ. ಇದಲ್ಲದೆ ಇತ್ತೀಚಿಗೆ ಬಾಗಲಕೋಟೆಯ ಉಪಚುನಾವಣೆಯಲ್ಲಿ ಉಮೇಶ್ ಮೇಟಿ ಅವರ ಗೆಲುವಿನಲ್ಲಿ ಪ್ರಮುಖ ಪಾತ್ರ ವಹಿಸಿದ್ದರು. ತಿಮ್ಮಾಪುರ ಅವರು ತಮ್ಮ ರಾಜಕೀಯ ಬದುಕಿನುದ್ದಕ್ಕೂ ಕಾಂಗ್ರೆಸ್‌ನ ತತ್ವ ಸಿದ್ಧಾಂತಗಳನ್ನು ಅನುಸರಿಸಿಕೊಂಡು ಬಂದಿದ್ದಾರೆ. ಪಕ್ಷ ಸಂಘಟನೆಗೆ ನಿರಂತರ ಶ್ರಮಿಸಿದ್ದಾರೆ. ಪಕ್ಷ ಇವರ ಶ್ರಮವನ್ನು ಪರಿಗಣಿಸಿ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರ ನೇತೃತ್ವದ ಸರ್ಕಾರದಲ್ಲಿ ಪ್ರಮುಖ ಖಾತೆಯ ಸಚಿವ ಸ್ಥಾನ ನೀಡಬೇಕು ಎಂದು ಆಗ್ರಹಿಸಿದ್ದಾರೆ.

ಬೆಳಗಾವಿ ಜಿಲ್ಲಾ ಮಧ್ಯವರ್ತಿ ಸಹಕಾರಿ ಬ್ಯಾಂಕಿನ ನಿರ್ದೇಶಕಿ ಹಾಗೂ ಎಐಸಿಸಿ ಸಂಯೋಜಕಿ ಸುನಿತಾ ಐಹೊಳೆ ಮಾತನಾಡಿ ಉತ್ತರ ಕರ್ನಾಟಕದ ದಲಿತ ಸಮುದಾಯದ ಹಿರಿಯ ನಾಯಕರಾಗಿರುವ ಆರ್ ಬಿ ತಿಮ್ಮಾಪುರ ನಾಲ್ಕೈದು ಬಾರಿ ಸಚಿವರಾಗಿ ರಾಜ್ಯದಲ್ಲಿ ಅನೇಕ ಅಭಿವೃದ್ಧಿ ಕೊಡುಗೆಗಳನ್ನು ನೀಡಿದ್ದಾರೆ. ಮುಖ್ಯಮಂತ್ರಿ ಡಿ ಕೆ ಶಿವಕುಮಾರ್ ಹಾಗೂ ರಾಜ್ಯ ಮತ್ತು ಕೇಂದ್ರ ವರಿಷ್ಠರು ಆರ್ ಬಿ ತಿಮ್ಮಪೂರ್ ಅವರಿಗೆ ಮಂತ್ರಿ ಸ್ಥಾನವನ್ನು ನೀಡಬೇಕೆಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಅಥಣಿ ತಾಲೂಕ ಮಾದಿಗ ಮೀಸಲಾತಿ ಹೋರಾಟ ಸಮಿತಿಯ ಅಧ್ಯಕ್ಷ ಹನುಮಂತ ಅದಾರ್ಂಯೂರ, ಸಮಾಜದ ಮುಖಂಡರಾದ ಕುಮಾರ ಗಸ್ತಿ, ಸಂತೋಷ್ ಹಾದಿಮನಿ, ಸದಾಶಿವ ದೊಡ್ಡಮನಿ, ಸುದೀಪ್ ಐಹೊಳೆ, ಸತೀಶ್ ಕುಲ್ಲೊಳ್ಳಿ, ಪ್ರಶಾಂತ್ ಆಚಾರಟ್ಟಿ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

# ಯುವಕ ಸಂಘಗಳ ಮೂಲಕ ಒಂದು ಸಾವಿರ ಗಿಡಗಳನ್ನು ನೆಡುವ ಸಂಕಲ್ಪ : ಸಿದ್ದಣ್ಣ ದುರದುಂಡಿ



**ಬೆಳಗಾವಿ ವಾರ್ತೆ ಮೂಡಲಗಿ :** ಸಕಾಲಕ್ಕೆ ಮಳೆಗಾಗಿ ಮತ್ತು ಸಮೃದ್ಧ ಪರಿಸರಕ್ಕಾಗಿ ಮರಗಿಡ ಗಳನ್ನು ಬೆಳೆಸುವುದು ಪ್ರತಿಯೊಬ್ಬರ ಜವಾಬ್ದಾರಿ. ಪರಿಸರವನ್ನು ಉಳಿಸುವುದು ನಮ್ಮೆಲ್ಲರ ಆದ್ಯ ಕರ್ತವ್ಯವಾಗಿದೆ, ಎಂದು ಕರ್ನಾಟಕ ರಾಜ್ಯ ಯುವ ಸಂಘಗಳ ಒಕ್ಕೂ ಟದ ಬೆಳಗಾವಿ ಜಿಲ್ಲಾಧ್ಯಕ್ಷ ಹಾಗೂ ಪರಿ ಸರ ಪ್ರೇಮಿ ಸಿದ್ದಣ್ಣ ದುರದುಂಡಿ ಯುವಕರಿಗೆ ಕರೆ ನೀಡಿದರು. ಪಟ್ಟಣದ ಶ್ರೀ ಮಂಜುನಾಥ ಸೈನಿಕ ತರಬೇತಿ ಕೇಂದ್ರದಲ್ಲಿ ಭಾರತ ಸರ್ಕಾರದ ಯುವ ಕಾರ್ಯ ಹಾಗೂ ಕ್ರೀಡಾ ಸಚಿವಾಲಯ, ಮೈ ಭಾರತ ಕೇಂದ್ರ ಬೆಳಗಾವಿ, ಜೈ ಕರ್ನಾಟಕ ಅಂಗವಿಕಲರ ಗ್ರಾಮೀಣ ಅಭಿವೃದ್ಧಿ ಸಂಘ ಹಳ್ಳೂರ ಹಾಗೂ ಸಂಕಲ್ಪ ಕ್ರೀಡಾ ಮತ್ತು ಸಮಾಜ ಸೇವಾ ಸಂಘ ಮೂಡಲಗಿ ಆಶ್ರಯದಲ್ಲಿ ಹಮ್ಮಿಕೊಂಡಿದ್ದ 'ವಿಶ್ವ ಪರಿಸರ ದಿನಾಚರಣೆ' ನಿಮಿತ್ಯ ಯುವ ಸಂಘಗಳಿಗೆ ಹಾಗೂ ಶಿಬಿರಾರ್ಥಿಗಳಿಗೆ ಸಸಿ ವಿತರಿಸುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಅವರು ಬೆಳಗಾವಿ ಜಿಲ್ಲೆಯಲ್ಲಿ ಯುವತಿ ಮಂಡಳ, ಯುವಕ ಸಂಘಗಳು, ಮಹಿಳಾ ಮಂಡಳಗಳ ಮೂಲಕ ಒಂದು ತಾಲೂಕಿಗೆ ನೂರರಂತೆ ಜಿಲ್ಲೆಯಲ್ಲಿ ಒಂದು ಸಾವಿರ ಗಿಡಗಳನ್ನು ನೆಟ್ಟು ಅವುಗಳನ್ನು ಪೋಷಣೆ ಮಾಡುವ ಸಂಕಲ್ಪ ಮಾಡಿದ್ದೇವೆ ಎಂದರು

ಸಂಕಲ್ಪ ಕ್ರೀಡಾ ಮತ್ತು ಸಮಾಜ ಸೇವಾ ಸಂಘದ ಅಧ್ಯಕ್ಷ ಸುಭಾಸ ಗೊಡ್ಯಾಗೋಳ ಮಾತನಾಡಿ, "ಇಂದಿನ ದಿನಮಾನದಲ್ಲಿ ಕಾಂಕ್ರೀಟ್ ರಸ್ತೆ ಮತ್ತು ಮನೆಗಳ ನಿರ್ಮಾಣಕ್ಕಾಗಿ ಪರಿಸರವನ್ನು ನಾಶ ಮಾಡಲಾಗುತ್ತಿದೆ. ಇದರಿಂದ ಮಳೆಯ ಪ್ರಮಾಣ ಕಡಿಮೆಯಾಗುತ್ತಿದ್ದು, ಪ್ರಾಣಿ-ಪಕ್ಷಿಗಳು ನೀರು ಮತ್ತು ಗಾಳಿಯಿಲ್ಲದೆ ಸಂಕಷ್ಟ ಅನುಭವಿಸುತ್ತಿವೆ. ಮನುಷ್ಯ ಇನ್ನಾದರೂ ಎಚ್ಚೆತ್ತುಕೊಂಡು ಪರಿಸರ ಉಳಿಸುವ ವ್ಯವಸ್ಥೆಯನ್ನು ಮಾಡಬೇ ಸಸಿ ನೆಡುವುದು ಮಾತ್ರವಲ್ಲ, ನೆಟ್ಟ ಸಸಿಗಳನ್ನು ಪೋಷಿಸಿ ಮರವಾಗಿ ಬೆಳೆಸುವವರೆಗೂ ನಾವು ಜವಾಬ್ದಾರಿ ವಹಿಸಿಕೊಳ್ಳಬೇಕು. ಆ ನಿಟ್ಟಿನಲ್ಲಿ ನಮ್ಮ ಸಿದ್ದಣ್ಣ ದುರದುಂಡಿ ಅವರು ಪರಿಸರ ಜಾಗೃತಿ ಮಾಡುತ್ತಿದಾರೆ. ಹಾಗಾಗಿ ಪ್ರತಿಯೊಬ್ಬರು ಪರಿಸರ ಸಂರಕ್ಷಣೆಗೆ ಕೈ ಜೋಡಿಸಬೇಕು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಮಂಜುನಾಥ ಶಿಕ್ಷಣ ಸಂಸ್ಥೆಯ ಮುಖ್ಯೋಪಾಧ್ಯಯರಾದ ಶ್ರೀಮತಿ ಶಿಲ್ಪಾ ಗಡಾದ ಶಿಕ್ಷಕ ರವಿ ಕರಿಗಾರ, ಮಂಜು ರೆಳೆಕರ ಕೃಷ್ಣ ಸರ್ ಹಣಮಂತ ಅಂಗಡಿ ಪೈಲಾವಾನ್ ಮಾರುತಿ ಸಿಂಧೆ, ಅಭಿಷೇಕ್ ಕಟ್ಟಿಮನಿ ಹಾಗೂ ಸೈನಿಕ ತರಬೇತಿ ಶಿಬಿರದ ವಿದ್ಯಾರ್ಥಿಗಳು ಸೇರಿದಂತೆ ಗಣ್ಯರು ಉಪಸ್ಥಿತರಿದ್ದರು.

# ಗೌರವದ ಆತ್ಮೀಯ ಸನ್ಮಾನ



**ಬೆಳಗಾವಿ ವಾರ್ತೆ ಹುಬ್ಬಳ್ಳಿ:** ಹೊರಕೇರಿ ಮಾಸ್ತರ ಶಿಕ್ಷಣ ಪ್ರತಿಷ್ಠಾನ, ರಾಣಿಚನ್ನಮ್ಮ ಪರಿಸರ ಸೇವಾ ಸಮಿತಿಯ, ಬಸವ ಪರಿಸರ ಸಂರಕ್ಷಣಾ ಸಮಿತಿಯ ಸದಸ್ಯರು ಕೆ ಎಂ ಸಿ ಆರ್.ಐ ಗೆ ತೆರಳಿ ನೂತನ ಕೆ ಎಂ ಸಿ ಆರ್ ಐ ನಿರ್ದೇಶಕರಾಗಿ ಅಧಿಕಾರ ಸ್ವೀಕರಿಸಿದ ಫಿಜಿಯಾಲಜಿ (ಶರೀರಶಾಸ್ತ್ರ) ವಿಭಾಗದ ಹಿರಿಯ ಪ್ರಾಧ್ಯಾಪಕ, ಮಾಜಿ ಪ್ರಾಂಶುಪಾಲ ಡಾ. ಕೆ. ಎಫ್ . ಕಮ್ಮಾರ ಅವರಿಗೆ ಹಾಗೂ ಕೆ ಎಂ ಸಿ ಆರ್ ಐ ನಿರ್ದೇಶಕರಾಗಿ ರೋಗಿಗಳಿಗೆ ಉತ್ತಮ ವೈದ್ಯಕೀಯ ಸೇವೆ ನೀಡಿ ಸೇವಾ ನಿವೃತ್ತರಾದ, ಶಸ್ತ್ರ ಚಿಕಿತ್ಸಾ ವಿಭಾಗದ ಮುಖ್ಯಸ್ಥ ಡಾ. ಈಶ್ವರ ಆರ್. ಹೊಸಮನಿ ಅವರಿಗೆ ಹೊರಕೇರಿ ಮಾಸ್ತರ ಶಿಕ್ಷಣ ಪ್ರತಿಷ್ಠಾನ, ರಾಣಿಚನ್ನಮ್ಮ ಪರಿಸರ ಸೇವಾ ಸಮಿತಿಯ, ಬಸವ ಪರಿಸರ ಸಂರಕ್ಷಣಾ ಸಮಿತಿಯ ವತಿಯಿಂದ ಶಾಲು, ಮಾಲಾರ್ಪಣೆ ಮಾಡಿ ಶ್ರದ್ಧಾ, ಭಕ್ತಿಯಿಂದ ಗೌರವದಿಂದ ಆತ್ಮೀಯವಾಗಿ ಸನ್ಮಾನಿಸಿದರು. ಹುತ್ಪೂರ್ವಕವಾಗಿ ಅಭಿನಂದನೆಗಳನ್ನು ಸಲ್ಲಿಸಿದರು. ನೂತನ ನಿರ್ದೇಶಕರ ಅವಧಿಯಲ್ಲಿ ರೋಗಿಗಳಿಗೆ ಉತ್ಕೃಷ್ಟ ವೈದ್ಯಕೀಯ ಸೇವೆ ಲಭಿಸುವಂತಾಗಲಿ ಎಂದು ಹಾಗೂ ಮಾಜಿ ನಿರ್ದೇಶಕರ ನಿವೃತ ಜೀವನ ಸುಖಕರವಾಗಿ ಇರಲೆಂದು ಆಶಯ ವ್ಯಕ್ತಪಡಿಸಿದರು. ಶುಭ ಕೋರಿದರು. ಸಕ್ಷಮ ಉತ್ತರ ಕರ್ನಾಟಕ ಪ್ರಾಂತದ ಅಧ್ಯಕ್ಷ ಡಾ ಸುನೀಲ್ ಗೋಖಲೆ, ರಾಣಿಚನ್ನಮ್ಮ ಪರಿಸರ ಸೇವಾ ಸಮಿತಿಯ ಕಾರ್ಯದರ್ಶಿ, ಬಸವ ಪರಿಸರ ಸಂರಕ್ಷಣಾ ಸಮಿತಿಯ ಕಾರ್ಯದರ್ಶಿ, ಕರ್ನಾಟಕ ಜ್ಞಾನ ವಿಜ್ಞಾನ ಸಮಿತಿಯ ಜಿಲ್ಲಾ ಘಟಕದ ಉಪಾಧ್ಯಕ್ಷ, ಕರ್ನಾಟಕ ವಚನ ಸಾಹಿತ್ಯ ಪರಿಷತ್‌ನ ಜಿಲ್ಲಾ ಘಟಕದ ಕಾರ್ಯಾಧ್ಯಕ್ಷ, ಹೊರಕೇರಿ ಮಾಸ್ತರ ಶಿಕ್ಷಣ ಪ್ರತಿಷ್ಠಾನ ಟ್ರಸ್ಟಿ, ಗ್ರಂಥಪಾಲಕ ಡಾ. ಸುರೇಶ ಡಿ. ಹೊರಕೇರಿ, ಡಾ ರಾಜಶೇಖರ ದ್ಯಾಬೇರಿ, ಡಾ ಶಶಿಕಲಾ ಈಶ್ವರ ಹೊಸಮನಿ, ಹೃತಿಕಾ, ಶೋಭನಾ, ರಮೇಶ್ ಕಳಸದ, ಡಾ ಈಶ್ವರ ಹಸಬಿ, ಅಂಜನಾ ಢವಳೇಶ್ವರ, ಸಿ ಜಿ ಜಿನಗಾ, ಪ್ರೇಮ, ವೈದ್ಯರು, ಶಿಕ್ಷಕರು, ವಿದ್ಯಾರ್ಥಿಗಳು, ಮುಂತಾದವರು ಭಾಗವಹಿಸಿದ್ದರು.

# ಸ್ವಚ್ಛತೆಯೆಂಬುದು ಪ್ರತಿದಿನದ ಆಚರಣೆಯಾಗಬೇಕು: ಅಮರನಾಥ ಜಾರಕಿಹೊಳಿ

**ಬೆಳಗಾವಿ ವಾರ್ತೆ ಗೋಕಾಕ:** ಆರೋಗ್ಯಕರ ಜೀವನಶೈಲಿಯುನ್ನು ಉತ್ತೇಜಿಸಲು ಹಾಗೂ ಸಾರ್ವಜನಿಕರಲ್ಲಿ ಸ್ವಚ್ಛತೆಯ ಅರಿವು ಮೂಡಿಸುವ ಉದ್ದೇಶದಿಂದ ಸೈಕಲ್ ಜಾಥಾ ಹಮ್ಮಿಕೊಳ್ಳಲಾಗಿದೆ. ಸ್ವಚ್ಛತೆಯೆಂಬುದು ಪ್ರತಿದಿನದ ಆಚರಣೆಯಾಗಬೇಕು ಎಂದು ಡಿಸಿಸಿ ಬ್ಯಾಂಕ ನಿರ್ದೇಶಕ ಹಾಗೂ ಯುವ ಧುರೀಣ ಅಮರನಾಥ ಜಾರಕಿಹೊಳಿ ತಿಳಿಸಿದರು.

ಅವರು, ತಾಲೂಕು ಆಡಳಿತ, ತಾಲೂಕು ಪಂಚಾಯತ ಹಾಗೂ ನಗರಸಭೆ ಇವರ ಸಹಯೋಗದಲ್ಲಿ ಫಿಟ್ ಇಂಡಿಯಾ ಆಂದೋಲನದಡಿ "ವಿಶ್ವ ಬೈಸಿಕಲ್" ದಿನಾಚರಣೆ ಅಂಗವಾಗಿ ಸ್ವಚ್ಛತಾ ರೈಡ್ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದರು.

ಸೈಕಲ್ ಜಾಥಾ ಕಾರ್ಯಕ್ರಮದಲ್ಲಿ ಡಿಸಿಸಿ ಬ್ಯಾಂಕ ನಿರ್ದೇಶಕ ಹಾಗೂ ಯುವ ಧುರೀಣ ಅಮರನಾಥ ಜಾರಕಿಹೊಳಿ ಸೈಕಲ್ ಸವಾರಿ ಮಾಡುವ ಮೂಲಕ ಪಾಲ್ಗೊಂಡರು. ಶಾಸಕ ಗೃಹ ಕಚೇರಿಯಿಂದ ಶುರುವಾದ ಸೈಕಲ್ ಜಾಥಾ ಬಸವೇಶ್ವರ ವೃತ್ತ, ಸಂಗೋಳಿ ರಾಯಣ್ಣ ವೃತ್ತದ ಮಾರ್ಗವಾಗಿ ತಹಸಿಲ್ದಾರ ಕಚೇರಿಗೆ ತಲಿಪಿತು.

ಈ ಜಾಥಾದಲ್ಲಿ ತಹಶೀಲದಾರ ಡಾ.ಮೋಹನ ಭಸ್ಮೆ, ತಾಪಂ ಕಾರ್ಯನಿರ್ವಾಹಕ ಅಧಿಕಾರಿ ಪರಶುರಾವ್ ಘಸ್ತೆ, ನಗರಸಭೆ ಪೌರಾಯುಕ್ತ ರವಿ ರಂಗಸುಭೆ, ತಾಲೂಕು ಮಟ್ಟದ ಅಧಿಕಾರಿಗಳು ವಿವಿಧ ಇಲಾಖೆ ಸಿಬ್ಬಂದಿಗಳು ಪಾಲ್ಗೊಂಡಿದ್ದರು.



ಗೋಕಾಕ: ಸೈಕಲ್ ಜಾಥಾ ಕಾರ್ಯಕ್ರಮದಲ್ಲಿ ಡಿಸಿಸಿ ಬ್ಯಾಂಕ ನಿರ್ದೇಶಕ ಹಾಗೂ ಯುವ ಧುರೀಣ ಅಮರನಾಥ ಜಾರಕಿಹೊಳಿ ಸೈಕಲ್ ಸವಾರಿ ಮಾಡುವ ಮೂಲಕ ಪಾಲ್ಗೊಂಡರು.

# ನಾಳೆ ವಿವಿದೆಡೆ ವಿದ್ಯುತ್ ವ್ಯತ್ಯಯ

**ಬೆಳಗಾವಿ ವಾರ್ತೆ ಮೂಡಲಗಿ:** 110 ಕೆವಿ ವಿದ್ಯುತ್ ವಿತರಣಾ ಕೇಂದ್ರ ಮೂಡಲಗಿ 110ಕೆವಿ ನಾಗನೂರ, 110ಕೆವಿ ತಿಗಡಿ ಉಪ ಕೇಂದ್ರಗಳಲ್ಲಿ ಮೊದನೇಯ ತ್ರೈಮಾಸಿಕ ನಿರ್ವಹಣೆಯ ಕಾರ್ಯ ಕೈಗೊಳ್ಳಲು ಉದ್ದೇಶಿಸಿರುವದರಿಂದ ಶುಕ್ರವಾರ .ಜೂ.12 ರಂದು ಮುಂಜಾನೆ 10.00 ರಿಂದ ಸಾಯಂಕಾಲ 5.00 ಗಂಟೆಯವರೆಗೆ ಮೂಡಲಗಿ, ಗುರ್ಲಾಪೂರ, ನಾಗನೂರ ಪಟ್ಟಣದಲ್ಲಿ ಹಾಗೂ ತಿಗಡಿ ವಿದ್ಯುತ್ ಕೇಂದ್ರದಿಂದ ಸರಬುರಾಜು ಆಗುವ ಹೊನಕುಪ್ಪಿ ಮತ್ತು ಖಂಟ್ರಟ್ಟಿ ಎನ್ ಜೆ ವಾಯ್ ಮೇಲೆ ಬರುವ ಎಲ್ಲ ಗ್ರಾಮಗಳಲ್ಲಿ ಹಾಗೂ ನೀರಾವರಿ ಪಂಪ್ ಸೆಟ್ ಮಾರ್ಗದ ವಿದ್ಯುತ್ ಪೂರೈಕೆಯಲ್ಲಿ ವಿದ್ಯುತ್ ವ್ಯತ್ಯಯ ಉಂಟಾಗಲಿದೆ, ಸಾರ್ವಜನಿಕರು ಸಹಕರಿಸಬೇಕು ಎಂದು ಮೂಡಲಗಿ ಹೆಸ್ಕಾಂ ಸಹಾಯಕ ಕಾರ್ಯ ನಿರ್ವಾಹಕ ಅಭಿಯಂತರ ಎಂ ಎಸ್ ನಾಗನ್ನವರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಾಧಕರೊಂದಿಗೆ ಸಂವಾದ ಕಾರ್ಯಕ್ರಮ




**ಬೆಳಗಾವಿ ವಾರ್ತೆ ಧಾರವಾಡ:** ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಬೆಳಗಾವಿ ವಿಭಾಗದ ವತಿಯಿಂದ ಜೂನ್ 6 ರಂದು ರಂಗಾಯಣದ ಸುವರ್ಣ ಸಾಂಸ್ಕೃತಿಕ ಸಮುಚ್ಚಯ ಭವನದಲ್ಲಿ ಧಾರವಾಡದ ಹಿರಿಯ ಚಿತ್ರಕಲಾವಿದ ಎಂ.ಆರ್.ಬಾಳಿಕಾಯಿ ಅವರ ಕುರಿತು ಸಾಧಕರೊಂದಿಗೆ ಸಂವಾದ ಕಾರ್ಯಕ್ರಮ ಏರ್ಪಡಿಸಲಾಗಿತ್ತು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಬೆಳಗಾವಿ ವಿಭಾಗದ ಜಂಟಿ ನಿರ್ದೇಶಕ ಕೆ.ಎಚ್.ಚನ್ನೂರ ಅವರು ಮಾತನಾಡಿ, ವಿಭಾಗದ ಒಂದು ಜಿಲ್ಲೆಯಲ್ಲಿ ತಿಂಗಳ ಮೊದಲ ಶನಿವಾರದಂದು ಆಯಾ ಜಿಲ್ಲೆಯಲ್ಲಿರುವ ನಾಡು-ನುಡಿ, ಕಲೆ, ಸಾಹಿತ್ಯ ಹಾಗೂ ಸಂಗೀತ ಹೀಗೆ ವಿವಿಧ ಕ್ಷೇತ್ರದಲ್ಲಿ ಸಲ್ಲಿಸಿರುವ ಗಣನೀಯ ಸೇವೆಯನ್ನು ಪರಿಗಣಿಸಿ, ಅವರ ಸಾಧನೆಯನ್ನು ಯುವ ಜನಾಂಗಕ್ಕೆ ಪರಿಚಯಿಸುವ ಉದ್ದೇಶದಿಂದ 'ಸಾಧಕರೊಂದಿಗೆ ಸಂವಾದ' ಎಂಬ ನೂತನ ಯೋಜನೆಯೊಂದನ್ನು ಪ್ರಸಕ್ತ ಸಾಲಿನಲ್ಲಿ ಜಾರಿಯಲ್ಲಿ ತಂದಿದೆ. ಅದರಂತೆ ಪ್ರಸ್ತುತ ಧಾರವಾಡ ಜಿಲ್ಲೆಯಿಂದಲೇ ಆರಂಭಗೊಂಡ ಈ ಕಾರ್ಯಕ್ರಮದಲ್ಲಿ ನಾಡಿನ ಹಿರಿಯ ಚಿತ್ರಕಲಾವಿದರಾದ ಮಹಾವೀರ ರಾಯಪ್ಪ ಬಾಳಿಕಾಯಿ ಅವರ ಜೀವನ-ಸಾಧನೆ ಕುರಿತು ಯುವ ಜನಾಂಗಕ್ಕೆ ಪರಿಚಯಿಸುವ ಕಾರ್ಯವನ್ನು ಈ ಮೂಲಕ ಮಾಡಲಾಗುತ್ತಿದೆ. ಎಂ.ಆರ್.ಬಾಳಿಕಾಯಿ ಅವರು ಚಿತ್ರಕಲಾ ಕ್ಷೇತ್ರಕ್ಕೆ ಸಲ್ಲಿಸಿರುವ ಸೇವೆಯನ್ನು ಸರ್ಕಾರ ಗುರುತಿಸಿದೆ ಎಂದು ಹೇಳಿದರು.

ಹಿರಿಯ ಚಿತ್ರಕಲಾವಿದ ಎಂ.ಆರ್.ಬಾಳಿಕಾಯಿ ಅವರು ಮಾತನಾಡಿ, ತಮ್ಮ ಬಾಲ್ಯ ಜೀವನ, ಕಲಾಕ್ಷೇತ್ರದಲ್ಲಿ ತಾವು ನಡೆದು ಬಂದ ದಾರಿಯನ್ನು ವಿವರಿಸುತ್ತ ಸತ್ಯದ ಹಾದಿಯಲ್ಲಿ ನಡೆದರೆ ನಮ್ಮ ಜೀವನ ಸುಗಮವಾಗಿರುತ್ತದೆ. ನನ್ನ ಸಾಧನೆಯ ಹಿಂದೆ ಇಡೀ ಸಮಾಜವೇ ಇದೆ. ಅದಕ್ಕಾಗಿ ನನ್ನ ಸಾಧನೆಯನ್ನು ಸಮಾಜಕ್ಕೇ ಅರ್ಪಿಸುತ್ತೇನೆ ಎಂದು ತಮ್ಮ ಅನುಭವದ ಮಾತುಗಳನ್ನು ಹಂಚಿಕೊಂಡರು.

ಎಷ್ಟು ಕಷ್ಟಗಳನ್ನು ಅನುಭವಿಸುತ್ತೇವೆಯೋ ಅವುಗಳೇ ಸಾಧನೆಯ ಮೆಟ್ಟಿಲುಗಳಾಗುತ್ತವೆ. ಯಾವುದೇ ಕಾರ್ಯವನ್ನು ಹೃದಯಪೂರ್ವಕವಾಗಿ ಮಾಡಿದಾಗ ಮಾತ್ರ ಯಶಸ್ಸು ಕಾಣಲು ಸಾಧ್ಯವಾಗುತ್ತದೆ. ನನ್ನ ಗುರುಗಳಾದ ಎಸ್.ಕೆ.ಭಾವನ್ನವರ ಅವರ ಮಾರ್ಗದರ್ಶನದಲ್ಲಿ ನಾನು ಚಿತ್ರಕಲೆಯನ್ನೇ ಆಯ್ಕೆಮಾಡಿಕೊಂಡು ಅದರಲ್ಲೇ ಮುಂದುವರೆದಿದ್ದೇನೆ. ಅನುಭವವೇ ನಮ್ಮ ಜೀವನಕ್ಕೆ ದಾರಿದೀಪವಾಗಬೇಕೆಂದರು.

ಪ್ರಶ್ನೋತ್ತರಗಳಲ್ಲಿ ಚಿತ್ರಕಲಾ ಕ್ಷೇತ್ರದಲ್ಲಿ ಎ.ಐ.ದಂತಹ ಬದಲಾವಣೆಗಳಿಂದುಂಟಾದ ಗೊಂದಲ, ಚಿತ್ರಕಲಾ ಶಿಕ್ಷಕರ ನೇಮಕಾತಿಯಿಂದ ಕಲಾ ಶಾಲೆಗಳು ಬಂದಾಗುತ್ತಿರುವುದು, ವಿದ್ಯಾರ್ಥಿಗಳಿಂದು ಕಲಾಕ್ಷೇತ್ರದಲ್ಲಿ ಹೆಚ್ಚೆಚ್ಚು ತೊಡಗಿ ಕೊಳ್ಳದೇ ಇರುವುದು ಇಂಥ ಅನೇಕ ವಿಷಯಗಳಿಗೆ ತಮ್ಮ ಅನುಭವದ ಮೂಲಕ ಕಲಾಕ್ಷೇತ್ರ ಉಳಿಸಿ ಬೆಳೆಸುವ ಕುರಿತು ತಿಳಿಸಿದರು.

ಡಿ.ವಿ.ಹಾಲಭಾವಿ ರಾಷ್ಟ್ರೀಯ ಸ್ಮಾರಕ ಟ್ರಸ್ಟ್ ಅಧ್ಯಕ್ಷ ಬಿ. ಮಾರುತಿ, ಮಹದೇವ ಜಗತಾಪ, ಡಾ.ಬಿ.ಎಲ್.ಚೌಹಾನ, ಪಿ.ಎಸ್.ಕಡೇಮನಿ, ಡಾ.ಎಸ್.ಸಿ.ಪಾಟೀಲ, ಎಮ್.ಎಸ್.ಚೌದರಿ, ಡಿ.ಎಂ.ಬಡಿಗೇರ, ಬಿ.ಐ.ಈಳಗೇರ ಅವರು ಪಾಲ್ಗೊಂಡು ಅನೇಕ ವಿಷಯಗಳ ಕುರಿತು ಸಂವಾದ ನಡೆಸಿದರು.

ಇದೇ ಸಂದರ್ಭದಲ್ಲಿ ಎಂ.ಆರ್.ಬಾಳಿಕಾಯಿ ಅವರು ಕುರಿತು ನಿರ್ಮಾಣಗೊಂಡ ಸಾಕ್ಷಚಿತ್ರವನ್ನು ಪ್ರದರ್ಶಿಸಲಾಯಿತು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಕುಮಾರ ಬೆಕ್ಕೇರಿ ಸ್ವಾಗತಿಸಿದರು. ಆರತಿ ದೇವಶಿಖಾಮಣಿ ನಿರೂಪಿಸಿದರು.

# ಜೂನ್ 21 ರಂದು 12ನೇ ಅಂತರರಾಷ್ಟ್ರೀಯ ಯೋಗ ದಿನಾಚರಣೆಯ ಅಗತ್ಯ ಸಿದ್ಧತೆಗೆ ಜಿಲ್ಲಾಧಿಕಾರಿ ಸ್ನೇಹಲ್ ಆರ್. ಸೂಚನೆ



**ಬೆಳಗಾವಿ ವಾರ್ತೆ ಧಾರವಾಡ:** ನಗರದ ಆರ್.ಎನ್.ಶೆಟ್ಟಿ ಜಿಲ್ಲಾ ಕ್ರೀಡಾಂಗಣದಲ್ಲಿ ವಿವಿಧ ಇಲಾಖೆಗಳ ಸಮನ್ವಯದೊಂದಿಗೆ ಜೂನ್ 21 ರಂದು ಬೆಳಿಗ್ಗೆ 6.45 ಗಂಟೆಗೆ 12 ನೇ ಅಂತರರಾಷ್ಟ್ರೀಯ ಯೋಗ ದಿನಾಚರಣೆಯನ್ನು ಆಯೋಜಿಸಲಾಗುವುದು. ಒಂದು ಸಾವಿರ ಯೋಗಾಪಟುಗಳು ಭಾಗವಹಿಸುವರು. ಸರ್ಕಾರದ ಶಿಷ್ಟಾಚಾರದಂತೆ ಕಾರ್ಯಕ್ರಮ ನಡೆಸಲಾಗುವುದು. ಇದಕ್ಕೆ ಬೇಕಾದ ಸಿದ್ಧತೆಯನ್ನು ಅಧಿಕಾರಿಗಳು ಮಾಡಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿ ಸ್ನೇಹಲ್ ಆರ್. ಅವರು ನಿರ್ದೇಶಿಸಿದರು.

ಅವರು ಬೆಳಿಗ್ಗೆ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಅಂತರಾಷ್ಟ್ರೀಯ ಯೋಗ ದಿನಾಚರಣೆ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ, ಮಾತನಾಡಿದರು.

ಯೋಗವನ್ನು ಕೇವಲ ಒಂದೇ ದಿನಕ್ಕೆ ಸೀಮಿತಗೊಳಿಸದೇ ಪ್ರತಿದಿನ ಯೋಗಾಸನಗಳನ್ನು ಮಾಡುವ ಮೂಲಕ ಉತ್ತಮ ಆರೋಗ್ಯವನ್ನು ಕಾಪಾಡಿಕೊಳ್ಳಬಹುದು. ಆರೋಗ್ಯ ರಕ್ಷಣೆಗೆ ಯೋಗ ಅತ್ಯುತ್ತಮ ಸಾಧನವಾಗಿದ್ದು, ಪ್ರತಿಯೊಬ್ಬ ರೂ ತಮ್ಮ ದೈನಂದಿನ ಜೀವನದಲ್ಲಿ ಯೋಗವನ್ನು ಅಳವಡಿಸಿಕೊಳ್ಳಬೇಕು ಎಂದು ಅವರು ಹೇಳಿದರು.

ನಗರದ ಯೋಗ ಫೆಡರೇಷನ್, ಯೋಗ ಒಕ್ಕೂಟ, ಯೋಗ ತರಬೇತಿ ಸಂಸ್ಥೆ, ಎನ್.ಸಿ.ಸಿ, ಎನ್.ಎಸ್.ಎಸ್ ಹಾಗೂ ಶಾಲಾ ಕಾಲೇಜುಗಳಿಂದ ಜನರು ಯೋಗ ಕಾರ್ಯಕ್ರಮದಲ್ಲಿ ಭಾಗವಹಿಸುವರು ಎಂದು ಅವರು ತಿಳಿಸಿದರು.

ಯೋಗ ನಡೆಯುವ ಸ್ಥಳದಲ್ಲಿ ಆಂಬುಲೆನ್ಸ್, ಕುಡಿಯುವ ನೀರು ಹಾಗೂ ಇನ್ನಿತರ ಮೂಲಸೌಕರ್ಯಗಳನ್ನು ಒದಗಿಸಬೇಕು. ಮಹಾನಗರ ಪಾಲಿಕೆಯಿಂದ ಸ್ವಚ್ಚತೆ ಹಾಗೂ ನೀರಿನ ವ್ಯವಸ್ಥೆ ಹಾಗೂ ವ್ಯವಸ್ಥಿತವಾಗಿ ಕಾರ್ಯಕ್ರಮ ನಡೆಯಲು ಅಗತ್ಯ ಕ್ರಮಗಳನ್ನು ಕೈಗೊಳ್ಳುವಂತೆ ಅವರು ತಿಳಿಸಿದರು.

ಎಲ್ಲ ಇಲಾಖೆಯ ಅಧಿಕಾರಿ, ಸಿಬ್ಬಂದಿಯವರು, ವಿವಿಧ ಸಂಘ ಸಂಸ್ಥೆಗಳ ಮುಖ್ಯಸ್ಥರು ತಮಗೆ ಅನುಕೂಲಕರವಾದ ಸಮಯದಲ್ಲಿ ಆನ್‌ಲೈನ್ ಮೂಲಕ ಯೋಗ ತರಬೇತಿಯನ್ನು ಪಡೆಯಬಹುದು. ಆನ್‌ಲೈನ್ ವೆಬ್‌ಸೈಟ್ https:// moa.habit. yogaref=Karnataka ಮೂಲಕ ಯೋಗ ತರಬೇತಿಗೆ ನೋಂದಾಯಿಸಿ ಕೊಂಡು ಯೋಗಾಭ್ಯಾಸ ಮಾಡಬಹುದು ಎಂದು ಅವರು ಹೇಳಿದರು.

ಜಿಲ್ಲೆಯ ಎಲ್ಲ ಆಯುಷ್ ವೈದ್ಯಾಧಿಕಾರಿಗಳು ಆಯುಷ್ಮಾನ್ ಆರೋಗ್ಯ ಮಂದಿರಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಯೋಗ ತರಬೇತಿದಾರರ ಸಹಕಾರದೊಂದಿಗೆ ನಿತ್ಯ ಯೋಗಾಭ್ಯಾಸದ ಆನ್‌ಲೈನ್ ತರಗತಿಗಳನ್ನು ಜೂನ್ 22, 2026 ರಿಂದ ಜೂನ್ 21, 2027 ರವರೆಗೆ ಒಂದು ವರ್ಷದ ಅವಧಿಗೆ ಆಯೋಜಿಸ ಲಾಗಿದೆ ಎಂದು ಅವರು ತಿಳಿಸಿದರು.

ಎಲ್ಲ ಆಯುಷ್ ವೈದ್ಯಾಧಿಕಾರಿಗಳು ತಮ್ಮ ಚಿಕಿತ್ಸಾಲಯ ಆಸ್ಪತ್ರೆ ವ್ಯಾಪ್ತಿಯಲ್ಲಿನ ಸಾರ್ವಜನಿಕರು, ಐಟಿ ಉದ್ಯೋಗಿಗಳಿಗೆ, ಯುವಜನತೆಗೆ ಹಾಗೂ ವೃತ್ತಿಪರರಿಗೆ ಯೋಗವನ್ನು ತಲುಪಿಸುವ ದೃಷ್ಟಿಯಿಂದ ವಾಯ್-ಬ್ರೇಕ್ (Y-Break) ಎಂಬ ಆ್ಯಪ್‌ನ್ನು ಡೌನಲೋಡ್ ಮಾಡಿಕೊಂಡು ಯೋಗವನ್ನು ಅನುಸರಿಸಲು ಪ್ರೇರೇಪಿಸಬೇಕೆಂದು ಅವರು ಸೂಚಿಸಿದರು.

ಸಭೆಯಲ್ಲಿ ವೈಧಾಧಿಕಾರಿ ಡಾ.ಶಶಿಧರ ತಳಕಲ್ ಅವರು ಸ್ವಾಗತಿಸಿ, ಸಭೆ ನಿರ್ವಹಿಸಿದರು. ಸಭೆಯಲ್ಲಿ ಡಿಸಿಪಿ ರವೀಶ ಸಿ.ಆರ್., ಅಪರ ಜಿಲ್ಲಾಧಿಕಾರಿ ಗೀತಾ ಸಿ.ಡಿ., ಜಿಲ್ಲಾ ಆಯುಷ್ ಅಧಿಕಾರಿ ಡಾ.ಗಣೇಶ ಕಬಾಡೆ, ಶಾಲಾ ಶಿಕ್ಷಣ ಇಲಾಖೆಯ ಅಧಿಕಾರಿಗಳು, ಆಯುಷ್ ಕಾಲೇಜುಗಳ ಮುಖ್ಯಸ್ಥರು, ಕೆ.ಎಂ.ಎಫ್ ಅಧಿಕಾರಿಗಳು, ಪತಂಜಲಿ ಯೋಗ ಸಮಿತಿ, ಎನ್.ಎಸ್.ಎಸ್ ಹಾಗೂ ಸ್ಕೌಟ್ಸ ಮತ್ತು ಗೈಡ್ಸ ಸಂಸ್ಥೆಯ ಮುಖ್ಯಸ್ಥರು ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಭಾಗವಹಿಸಿದ್ದರು.

# ಅಂತರ ಜಿಲ್ಲಾ ಮನೆ ಕಳ್ಳರ ಬಂಧನ

**ಬೆಳಗಾವಿ ವಾರ್ತೆ ನವಲಗುಂದ:** ಸ್ಥಳೀಯ ಬಸ್ತಿ ಪ್ಲಾಟ್ ನಿವಾಸಿ ಅಲಾಗೌಡ ತಂದೆ ಹನಮಂತ ಗೌಡ ಬಾಲನಗೌಡ ಇವರ ಮನೆ ಕಳ್ಳತನ ಕುರಿತು ದೂರು ನೀಡಿದ ಹಿನ್ನಲೆ ಪ್ರಕರಣ ದಾಖಲಿಸಿಕೊಂಡು ತನಿಖೆ ನಡೆಸಿದ ನವಲಗುಂದ ಪೊಲೀಸರು ಆರೋಪಿಗಳನ್ನು ಪತ್ತೆ ಹಚ್ಚಿ ಬಂದಿಸುವಲ್ಲಿ ಯಶಸ್ವಿಯಾಗಿದ್ದಾರೆ.

ಪಟ್ಟಣದಲ್ಲಿನ ಸಿ ಸಿ ಕ್ಯಾಮರಾ ಹಾಗೂ ತಂತ್ರಜ್ಞಾನ ಮಾಹಿತಿ ಆಧರಿಸಿ ಸಿನಿಮೀಯ ರೀತಿಯಲಿ ಇಬ್ಬರು ಆರೋಪಿತರಾದ ಜಯರಾಜ ತಂದೆ ಈರಪ್ಪ ಪಾಟೀಲ ಉರ್ಫ ಜಾದವ ಸಾ. ಓಬಳಾಪೂರ ತಾಂಡಾ(SLT )ತಾ.ರಾಮದುಗ ಜಿ.ಬೆಳಗಾವಿ ಹಾಗೂ ವಿನೋದ ತಂದೆ ಜಯರಾಮ ಲಮಾಣಿ ಸಾ.ಹಲಕಿ ತಾಂಡಾ ತಾ.ಸವದತ್ತಿ ಜಿ. ಬೆಳಗಾವಿ ಅವರನ್ನು ಬಂಧಿಸಲಾಗಿದೆ.

ಕಳ್ಳತನವಾದ 10 ಗ್ರಾಂ ತೂಕದ ಒಂದು ಬಂಗಾರದ ನೆ ಸ ಅ:ಕಿ: 1,10,000/- ರೂ, 08 ಗ್ರಾಂ ತೂಕದ ಒಂದು ಬಂಗಾರದ ತಾಳಿ ಅ:ಕಿ: 80,000 ರೂ, 13 ಗ್ರಾಂ ತೂಕದ ಬಂಗಾರದ ಒಂದು ಜೊತೆ ಬೆಂಡಾಲಿ ಮತ್ತು ಡ್ರಾಫ ಅ:ಕಿ: 160000 ರೂ, 05 ಗ್ರಾಂ ತೂಕದ ಎರಡು ಜೊತೆ ಬಂಗಾರದ ರಿಂಗ 50000 ರೂ, 01 ಗ್ರಾಂ ತೂಕದ ಒಂದು ಬಂಗಾರದ ಕ್ಯಾಯಿನ 12,000 ರೂ, 04 ಗ್ರಾಂ ತೂಕದ ಒಂದು ಬಂಗಾರದ ಪದಕ ಇರುವ ಗುಂಡಿನ ಸರ 50000 ರೂ, 5 ಗ್ರಾಂ ತೂಕದ ಒಂದು ಬಂಗಾರದ ಉಂಗುರ 50000 ರೂ ಹೀಗೆ ಒಟ್ಟು ಅಂದಾಜು 5,12,000 ರೂ ಕಿಮ್ಮತ್ತಿನ 46 ಗ್ರಾಂ ಬಂ ಗಾರದ ಆಭರಣಗಳು ಮತ್ತು ಕೃತ್ಯಕ್ಕೆ ಬಳೆಸಿ ದ ಒಂದು ಮೋಟರ ಸೈಕಲನ್ನು ಆರೋ ಪಿತರಿಂದ ಜಪ್ತ ಮಾಡಿಕೊಂಡಿದ್ದಾರೆ.

ನವಲಗುಂದ ಠಾಣೆಯ ಸಿಪಿಐ ರವಿಕುಮಾರ ಕಪ್ಪತ್ತನವರ ನವಲಗುಂದ ಪಿಎಸ್ಐ ಜನಾರ್ಧನ ಬಿ ಹಾಗೂ ಅಣ್ಣಿಗೇರಿ ಪಿ ಎಸ್ ಐ ಉಮಾದೇವಿ, ಎಎಸ್ಐ ಎಸ್ ಡಿ ಮಲನಗೌಡ್ರ ಹಾಗೂ ಸಿಬ್ಬಂದಿಗಳಾದ ಸುರೇಶ ಹುರಳಿ, ಸಂತೋಷ ಶಿಂಗಣವರ, ಮಂಜು ನಾಗಾವಿ, ಚನ್ನಮಲಯ್ಯ ಮಠಪತಿ, ಗೂಳಪ್ಪ ಜಗಲಿ ಕಾರ್ಯ ವೈಖರಿಯನ್ನು ಮೆಚ್ಚಿ ಧಾರವಾಡ ಎಸ್.ಪಿ, ಹೆಚ್ಚುವರಿ ಎಸ್.ಪಿ ಹಾಗೂ ಡಿಎಸ್ ಪಿ ಅವರು ಶ್ಲಾಘಿಸಿರುತ್ತಾರೆ.



# ಪರಿಸರ ದಿನಾಚರಣೆ



**ಬೆಳಗಾವಿ ವಾರ್ತೆ ಚನ್ನಮ್ಮನಕಿತ್ತೂರ:** ತಾಲೂಕಿನ ದೇವಗಾಂವ ಶ್ರೀ ತವನಪ್ಪ ಅವಲಕ್ಕಿ ಪ್ರೌಢಶಾಲೆ ಆವರಣದಲ್ಲಿಪರಿಸರ ಸಂದರ್ಭದಲ್ಲಿ ಶಾಲಾ ಮಕ್ಕಳೊಂದಿಗೆ ಗಿಡನೆಟ್ಟು ಸಸಿಗೆ ನೀರುಣಿಸಿ ಮಾತನಾಡಿದ ಧರ್ಮಸ್ಥಳ ಸಂಘದ ತಾಲೂಕ ಯೋಜನಾಧಿಕಾರಿ ಬಿ.ಆರ್.ಯೋಗೇಶ ಪ್ರತಿಯೊಬ್ಬರು ತಮ್ಮ ಹುಟ್ಟು ಹಬ್ಬದ ನಿಮಿತ್ಯ ದುಂದು ವೆಚ್ಚ ಮಾಡುವ ಬದಲು ಗಿಡ ನೆಟ್ಟು ಹುಟ್ಟುಹಬ್ಬ ಅರ್ಥಪೂರ್ಣವಾಗಿ ಆಚರಣೆ ಮಾಡಿ. ಅದು ನಾಳೆ ನಿಮ್ಮ ಭವಿಷ್ಯದ ಕಾಲಕ್ಕೆ ನೆರಳು, ಹಣ್ಣು ನೀಡುತ್ತದೆ. ಎಂದು ಹೇಳಿದರು.

ಮುಖ್ಯೋಪಾಧ್ಯಾಯ ಶ್ರೀಶೈಲ್ ಅಂಗಡಿ ಸಸಿಗೆ ನೀರುಣಿಸುವ ಮೂಲಕ ಉದ್ಘಾಟಿಸಿ ಯೋಜನೆಯ ಹಲವು ಕಾರ್ಯಕ್ರಮದ ಮತ್ತು ಯೋಜನೆಯಿಂದ ಶಾಲೆಗೆ ದೊರೆತಂಥ ಅನುದಾನದ ಮಾಹಿತಿ ನೀಡಿ ಮಕ್ಕಳಿಗೆ ಪರಿಸರ ಕಾಪಾಡುವ ಕುರಿತು ತಿಳಿಸಿದರು. ಪರಿಸರ ದಿನಾಚರಣೆ ಅಂಗವಾಗಿ ಪ್ರಬಂಧ ಸ್ಪರ್ಧೆ ಏರ್ಪಡಿಸಿದ್ದು ಭಾಗವಹಿಸಿದ ವಿದ್ಯಾರ್ಥಿಗಳಿಗೆ ಬಹುಮಾನ ವಿತರಿಸಲಾಯಿತು

ಕಾರ್ಯಕ್ರಮದಲ್ಲಿ ಶಾಲಾ ಚೇರಮನ್, ನಿರ್ದೇಶಕ ಮಂಡಳಿ, ಗುತ್ತಿಗೆದಾರ ರಾಜಶೇಖರ್ ಹಿರೇಮಠ್, ಗ್ರಾಪಂ ಸದಸ್ಯ ಬಸವರಾಜ ನಾಯ್ಕರ, ಸಹ ಶಿಕ್ಷಕ ಕರೆಪ್ಪ ತಳವಾರ, ಒಕ್ಕೂಟದ ಅಧ್ಯಕ್ಷ ಚಂಪ ಹರಿಶೇಟ್ರು, ಶಾಲಾ ಗುರು ವೃಂದದವರು ಹಾಗೂ ವಲಯದ ಮೇಲ್ವಿಚಾರಕ ರಂಜಿನಿ, ಸೇವಾ ಪ್ರತಿನಿಧಿ ಶ್ರುತಿ ಮತ್ತು ಎಲ್ಲ ಸಹ ಶಿಕ್ಷಕರು, ವಿದ್ಯಾರ್ಥಿಗಳು, ಗ್ರಾಮಸ್ಥರು ಉಪಸ್ಥಿತರಿದ್ದರು.

# ಬೆಳಘಟ್ಟಿ ಶಾಲೆಯಲ್ಲಿ ವಿಶ್ವ ಪರಿಸರ ದಿನಾಚರಣೆ

**ಬೆಳಗಾವಿ ವಾರ್ತೆ ಗದಗ:** ತಾಲೂಕಿನ ಬೆಳಘಟ್ಟಿ ಸರ್ಕಾರಿ ಶಾಲೆಯಲ್ಲಿ ವಿಶ್ವ ಪರಿಸರ ದಿನಾಚರಣೆಯನ್ನು ಅರ್ಥಪೂರ್ಣವಾಗಿ ಆಚರಿಸಲಾಯಿತು. ಈ ಸಂದರ್ಭದಲ್ಲಿ ಗದಗ ಡಯಟ್‌ನ ಉಪ ಪ್ರಾಂಶುಪಾಲರಾದ ಜಿ.ಎಂ. ಮಂದಿನಮನಿ ಅವರು ಶಾಲೆಗೆ ಭೇಟಿ ನೀಡಿ ಶೈಕ್ಷಣಿಕ ಹಾಗೂ ಆಡಳಿತಾತ್ಮಕ ಚಟುವಟಿಕೆಗಳ ಸಮಗ್ರ ಪರಿಶೀಲನೆ ನಡೆಸಿ ಮಾರ್ಗದರ್ಶನ ನೀಡಿದರು.

ಶಾಲೆಯ ದಾಖಲಾತಿ ಆಂದೋಲನ, ಪಾಲಕ-ಪೋಷಕರ ಮಹಾಸಭೆ, ವಾರ್ಷಿಕ ಕ್ರಿಯಾಯೋಜನೆ, ಸಂಯುಕ್ತ ವೇಳಾಪಟ್ಟಿ, ತರಗತಿವಾರು ಸಾಮರ್ಥ್ಯಗಳ ಪಟ್ಟಿ, ಸೇತುಬಂಧ ಕಾರ್ಯಕ್ರಮದ ಪೂರ್ವಸಿದ್ಧತೆ, ಶಾಲಾ ಮೈದಾನದ ಸ್ವಚ್ಛತೆ, ಬೋಧನಾ ಕೊಠಡಿಗಳ ನಿರ್ವಹಣೆ ಹಾಗೂ ವಿವಿಧ ಶೈಕ್ಷಣಿಕ ಚಟುವಟಿಕೆಗಳನ್ನು ಅವಲೋಕಿಸಿ ಶಿಕ್ಷಕರಿಗೆ ಅಗತ್ಯ ಸಲಹೆಗಳನ್ನು ನೀಡಿದರು.

ನಂತರ ವಿಶ್ವ ಪರಿಸರ ದಿನಾಚರಣೆಯ ಅಂಗವಾಗಿ ಶಾಲಾ ಆವರಣದಲ್ಲಿ ಸಸಿ ನೆಡುವ ಕಾರ್ಯಕ್ರಮ ನಡೆಯಿತು. ಸಸಿಗಳನ್ನು ನೆಡುವ ಮೂಲಕ ಪರಿಸರ ಸಂರಕ್ಷಣೆಯ ಮಹತ್ವವನ್ನು ಮಕ್ಕಳಿಗೆ ತಿಳಿಸಲಾಯಿತು.

ಈ ವೇಳೆ ಮಾತನಾಡಿದ ಜಿ.ಎಂ. ಮಂದಿನಮನಿ ಅವರು, "ಹಸಿರೇ ಉಸಿರು. ಪ್ರತಿಯೊಬ್ಬ ವಿದ್ಯಾರ್ಥಿಯೂ ಒಂದು ಗಿಡವನ್ನು ನೆಟ್ಟು ಅದರ ಪಾಲನೆ-ಪೋಷಣೆಯ ಜವಾಬ್ದಾರಿಯನ್ನು ವಹಿಸಬೇಕು. ಗಿಡಕ್ಕೆ ಮಗುವಿನ ಹೆಸರನ್ನೇ ನಾಮಕರಣ ಮಾಡಿ ಅದರ ಬೆಳವಣಿಗೆಯನ್ನು ಗಮನಿಸುವ ಮೂಲಕ ಪರಿಸರದ ಬಗ್ಗೆ ಕಾಳಜಿ ಮತ್ತು ಜವಾಬ್ದಾರಿಯನ್ನು ಬೆಳೆಸಬೇಕು" ಎಂದು ಹೇಳಿದರು.

ಜೂನ್ 5ರಂದು ಮಾತ್ರ ಸಸಿ ನೆಡುವುದರಿಂದ ಪರಿಸರ ಸಂರಕ್ಷಣೆ ಸಾಧ್ಯವಿಲ್ಲ. ವರ್ಷದ ಪ್ರತಿದಿನವೂ ಪರಿಸರದ ಬಗ್ಗೆ ಕಾಳಜಿ ವಹಿಸುವ ಮನೋಭಾವ ಬೆಳೆಸಿಕೊಳ್ಳಬೇಕು. ಗಿಡ-ಮರಗಳಿಂದ ದೊರೆಯುವ ಶುದ್ಧ ಗಾಳಿ, ನೆರಳು ಹಾಗೂ ಪರಿಸರ ಸಮತೋಲನದ ಮಹತ್ವವನ್ನು ಮಕ್ಕಳಿಗೆ ವಿವರಿಸಿದರು.



ಕಾರ್ಯಕ್ರಮದಲ್ಲಿ ಶಾಲೆಯ ಎಸ್‌ಡಿಎಂಸಿ ಅಧ್ಯಕ್ಷ ದೇವಪ್ಪ ಹಾಲಪ್ಪ ಕೋಟಿ, ಉಪಾಧ್ಯಕ್ಷೆ ಅನ್ನಪೂರ್ಣ ಸತ್ಯಪ್ಪ ಕಟ್ಟೆಣ್ಣವರ, ಎಸ್‌ಡಿಎಂಸಿ ಸದಸ್ಯರು, ಶಾಲೆಯ ಪ್ರಧಾನ ಗುರು ಅಣ್ಣಪ್ಪ ನೀಲಗಿರಿ, ಹಿರಿಯ ಶಿಕ್ಷಕರಾದ ನಾಗಪ್ಪ ಎಚ್. ಗೊಂದಿ ಹಾಗೂ ಆರ್.ವೈ. ಪಾಟೀಲ, ಅಕ್ಷರ ದಾಸೋಹ ಸಿಬ್ಬಂದಿಗಳಾದ ಪುಷ್ಪ ನಿಚ್ಚಳ ಮತ್ತು ಫಾತಿಮಾ ಬೇಗಂ ನೆಗಳೂರು ಸೇರಿದಂತೆ ಶಿಕ್ಷಕರು ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದರು.

ಸಸಿ ನೆಡುವ ಮೂಲಕ ವಿದ್ಯಾರ್ಥಿಗಳಲ್ಲಿ ಪರಿಸರ ಜಾಗೃತಿ ಮೂಡಿಸುವ ಉದ್ದೇಶದಿಂದ ಆಯೋಜಿಸಿದ್ದ ಕಾರ್ಯಕ್ರಮವು ಅರ್ಥಪೂರ್ಣವಾಗಿ ಹಾಗೂ ಉತ್ಸಾಹಭರಿತವಾಗಿ ನೆರವೇರಿತು.



**ಬೆಳಗಾವಿ ವಾರ್ತೆ ಧಾರವಾಡ:** ನಗರದ ವಾರ್ಡ್ 73 ರ ಶಿವಶಂಕರ ಕಾಲೊನಿಯಲ್ಲಿ ಮಹಾನಗರ ಪಾಲಿಕೆ ಸದ್ಯಸರಾದ ಶ್ರೀಮತಿ ಶೀಲಾ ಮಂಜುನಾಥ ಕಾಟಕರ ಅವರ ಅನುದಾನದ ಅಡಿಯಲ್ಲಿ ಸಮುದಾಯ ಭವನ ಕಟ್ಟಡದ ಸ್ಲಾಬ್ ಹಾಕುವ ಕಾಮಗಾರಿಗೆ ಪೂಜೆ ಸಲ್ಲಿಸಲಾಯಿತು. ತೋಟಪ್ಪ ನಿಡಗುಂದಿ, ಗಣೇಶ ಪೂಜಾರ, ಕೃಷ್ಣಪ್ಪ ಕನಾನಾ, ಸಹದೇವ ದೊಡಮನಿ, ಬಾಬು ಪೂಜಾರ, ಪ್ರಕಾಶ ಒಂಟಮನಿ, ಚಂದ್ರು ಪೂಜಾರ, ಜಯರಾಜ ಡೋಂಗಿ, ಬಸವರಾಜ ದೇವರಮನಿ, ಅರುಣ ಪೂಜಾರ ಉಪಸ್ಥಿತರಿದ್ದರು.

# ಸಚಿವ ಸ್ಥಾನ ನೀಡಲು ಮನವಿ ಸಲ್ಲಿಕೆ



**ಬೆಳಗಾವಿ ವಾರ್ತೆ ನವಲಗುಂದ:** ಕುಡಿಯುವ ನೀರಿನ ಮಹತ್ವದ ಯೋಜನೆಯಾದ ಮಹದಾಯಿ ಕಳಸಾ ಬಂಡೂರಿ ನದಿಗಳ ಜೋಡನೆ ಹೋರಾಟದ ರೂವಾರಿಗಳಾದ ಶಾಸಕ ಎನ್ ಹೆಚ್ ಕೊನರಡ್ಡಿ ಅವರಿಗೆ ಸಂಪುಟ ದರ್ಜೆಯ ಸಚಿವ ಸ್ಥಾನ ನೀಡಬೇಕು ಎಂದು ಆಗ್ರಹಿಸಿ ತಾಲ್ಲೂಕು ವಾಲ್ಮೀಕಿ ನಾಯಕ ಸಂಘದಿಂದ ತಹಶೀಲ್ದಾರ ಸುಧೀರ್ ಸಾಹುಕಾರ ಮುಖಾಂತರ ಸಿಎಂ ಡಿ ಕೆ ಶಿವಕುಮಾರ ಅವರಿಗೆ ಮನವಿ ಸಲ್ಲಿಸಿದರು.

ಈ ವೇಳೆ ತಾಲ್ಲೂಕು ಅಧ್ಯಕ್ಷ ಸುಭಾಸ್ ದುಬ್ಬದಮಟ್ಟಿ ಮಾತನಾಡಿ ನವಲಗುಂದ ವಿಧಾನಸಭಾ ಕ್ಷೇತ್ರದಲ್ಲಿ ನಮ್ಮ ಹೊಲ ನಮ್ಮ ರಸ್ತೆ ಮಾಡಿಸುವ ಮೂಲಕ ಚಕ್ಕಡಿದಾರಿ ಹರಿಕಾರರೆಂದೆ ಹೆಸರಾದ ಶಾಸಕ ಎನ್ ಎಚ್ ಕೋನರಡ್ಡಿಯವರು ಯಾವುದೇ ಜಾತಿಯ ತಾರತಮ್ಯ ಮಾಡದೆ ಎಲ್ಲ ಸಮಾಜದವರನ್ನು ಸಮಾನಂತರವಾಗಿ ನೋಡಿಕೊಳ್ಳುತ್ತಿರುವ ಅವರನ್ನು ಕೃಷಿ ಸಚಿವರನ್ನಾಗಿ ಮಾಡುವ ಮೂಲಕ ಜಿಲ್ಲೆಯ ಅಭಿವೃದ್ಧಿಗಾಗಿ ಅನುಕೂಲ ಮಾಡಿಕೊಡಬೆಕೆಂದು ಸಿಎಂ ಡಿ ಕೆ ಶಿವಕುಮಾರ ಅವರನ್ನು ಒತ್ತಾಯಿಸಿದರು.

ಅಣಿಗೇರಿ ಪುರಸಭೆ ಅಧ್ಯಕ್ಷ ಶಿವಾನಂದ ಬೆಳಹಾರ, ತಾಲ್ಲೂಕು ಅಧ್ಯಕ್ಷ ರಾಮಣ್ಣ ದೊಡಮನಿ, ಉಡಚಪ್ಪ ಜಾಲಕ್ಕನವರ, ಮದುಮತಿ ರಾಯನಗೌಡ್ರ, ಶರಣಪ್ಪ ವಾಲ್ಮೀಕಿ, ಹನಮಂತ ತಳವಾರ ರಾಮಣ್ಣ ದೊಡಮನಿ ಇತರರು ಇದ್ದರು.

# ಜನರ ಸಮಸ್ಯೆಗಳಿಗೆ ಮಾನವೀಯ ಸ್ಪಂದನೆ ನೀಡಿ; ನೀರು, ಬೀಜ-ಗೊಬ್ಬರ ಸಮರ್ಪಕವಾಗಿ ಪೂರೈಕೆ ಮಾಡಿ : ಬಸವರಾಜ ಬೊಮ್ಮಾಯಿ






**ಬೆಳಗಾವಿ ವಾರ್ತೆ ಗದಗ:** ಕೇಂದ್ರ ಹಾಗೂ ರಾಜ್ಯ ಸರ್ಕಾರಗಳ ಸಹಭಾಗಿತ್ವದ ಯೋಜನೆಗಳನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸುವ ಮೂಲಕ ಜನಸಾಮಾನ್ಯರಿಗೆ ತಲುಪಿಸುವ ಜವಾಬ್ದಾರಿ ಅಧಿಕಾರಿಗಳ ಮೇಲಿದೆ. ಅಧಿಕಾರಿಗಳು ಸ್ಪಷ್ಟ ಗುರಿ, ಬದ್ಧತೆ ಹಾಗೂ ಮಾನವೀಯ ದೃಷ್ಟಿಕೋನದೊಂದಿಗೆ ಕಾರ್ಯನಿರ್ವಹಿಸಬೇಕು ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಗದಗ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಮಂಗಳವಾರ ನಡೆದ ಕೇಂದ್ರ ಪುರಸ್ಕೃತ ಯೋಜನೆಗಳ ಜಿಲ್ಲಾ ಅಭಿವೃದ್ಧಿ ಮತ್ತು ಉಸ್ತುವಾರಿ ಸಮಿತಿಯ (ದಿಶಾ) ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಸರ್ಕಾರದ ಮುಖವಾಗಿ ಆಡಳಿತ ವ್ಯವಸ್ಥೆ ಕಾರ್ಯನಿರ್ವಹಿಸುತ್ತಿದ್ದು, ಜನರ ಸಮಸ್ಯೆಗಳಿಗೆ ಸ್ಪಂದಿಸುವಲ್ಲಿ ಅಧಿಕಾರಿಗಳು ಹೆಚ್ಚು ಹೊಣೆಗಾರಿಕೆ ಪ್ರದರ್ಶಿಸಬೇಕು ಎಂದರು.

ಪ್ರಸ್ತುತ ಜಾಗತಿಕ ಪರಿಸ್ಥಿತಿಯಲ್ಲಿ ಯುದ್ಧ ಸೇರಿದಂತೆ ಹಲವು ಬೆಳವಣಿಗೆಗಳು ದೇಶದ ಆರ್ಥಿಕತೆ ಮತ್ತು ಜನಜೀವನದ ಮೇಲೆ ಪರಿಣಾಮ ಬೀರುವ ಸಾಧ್ಯತೆಗಳಿವೆ. ಇಂತಹ ಸಂದರ್ಭಗಳಲ್ಲಿ ಜನರಿಗೆ ಸರ್ಕಾರ ತಮ್ಮೊಂದಿಗಿದೆ ಎಂಬ ಭರವಸೆ ಮೂಡಿಸುವ ಕೆಲಸವನ್ನು ಆಡಳಿತ ವ್ಯವಸ್ಥೆ ಮಾಡಬೇಕು.

ಅಧಿಕಾರಿಗಳಲ್ಲಿ ಧನಾತ್ಮಕ ಚಿಂತನೆ ಮತ್ತು ಸೇವಾ ಮನೋಭಾವ ಇರಬೇಕು. "ಆಳ್ವಿಕೆ ಮಾಡುವವರು ಆಡಳಿತ ಮಾಡಲು ಹೊರಟಿದ್ದಾರೆ, ಆಡಳಿತ ಮಾಡುವವರು ಆಳ್ವಿಕೆ ಮಾಡಲು ಹೊರಟಿದ್ದಾರೆ. ಇದು ಸರಿಯಾದ ಕ್ರಮವಲ್ಲ" ಎಂದು ಅವರು ಅಸಮಾಧಾನ ವ್ಯಕ್ತಪಡಿಸಿದರು.

ಗದಗ-ಬೆಟಗೇರಿ ಅವಳಿ ನಗರದ ಕುಡಿಯುವ ನೀರಿನ ಸಮಸ್ಯೆಯನ್ನು ಪ್ರಸ್ತಾಪಿಸಿದ ಬೊಮ್ಮಾಯಿ, ಮುಖ್ಯ ನೀರು ಸರಬರಾಜು ಪೈಪ್‌ಗಳಿಗೆ ಅಳವಡಿಸಲಾಗಿರುವ ಅಕ್ರಮ ಸಂಪರ್ಕಗಳನ್ನು ತೆರವುಗೊಳಿಸುವಂತೆ ಹಿಂದಿನ ಸಭೆಯಲ್ಲಿಯೇ ಸೂಚನೆ ನೀಡಲಾಗಿತ್ತು. ಆದರೆ ಇದುವರೆಗೆ ಕ್ರಮ ಕೈಗೊಳ್ಳದಿರುವುದು ಅಧಿಕಾರಿಗಳ ನಿರ್ಲಕ್ಷ್ಯವನ್ನು ತೋರಿಸುತ್ತದೆ ಎಂದು ಬೊಮ್ಮಾಯಿ ಹೇಳಿದರು.

ಅಧಿಕಾರಿಗಳಲ್ಲಿ ಜನರಿಗೆ ನೀರು ಪೂರೈಸುವ ಬದ್ಧತೆ ಇರಬೇಕು. ಹಾವೇರಿ ಜಿಲ್ಲೆಯಲ್ಲಿಯೂ ಇದೇ ರೀತಿಯ ಸಮಸ್ಯೆ ಇತ್ತು. ಆದರೆ ಸಮರ್ಪಕ ಕ್ರಮಗಳಿಂದ ವಾರಕ್ಕೊಮ್ಮೆ ನೀರು ಪೂರೈಕೆ ಮಾಡಲಾಗುತ್ತಿದೆ. ಅದೇ ರೀತಿಯ ವ್ಯವಸ್ಥೆಯನ್ನು ಗದಗದಲ್ಲಿಯೂ ಜಾರಿಗೆ ತರಬೇಕು ಎಂದು ಸೂಚಿಸಿದರು.

ಅವಳಿ ನಗರ ಸೇರಿದಂತೆ ಜಿಲ್ಲೆಯ ಗ್ರಾಮೀಣ ಭಾಗಗಳಲ್ಲಿ ನೀರು ಪೂರೈಕೆಯಲ್ಲಿ ಉಂಟಾಗುತ್ತಿರುವ ವ್ಯತ್ಯಯದ ಬಗ್ಗೆ ತೀವ್ರ ಅಸಮಾಧಾನ ವ್ಯಕ್ತಪಡಿಸಿದ ಅವರು, ನಮ್ಮ ಸಹನೆಯನ್ನು ಪರೀಕ್ಷಿಸಬೇಡಿ ಎಂದು ಅಧಿಕಾರಿಗಳಿಗೆ ಎಚ್ಚರಿಕೆ ನೀಡಿದರು. ಗದುಗಿನ ನೀರಿನ ಗ್ರಹಣ ಪ್ರದೇಶ ಹೂಳಿನಿಂದ ತುಂಬಿರುವ ಸಮಸ್ಯೆಗೆ ಶಾಶ್ವತ ಪರಿಹಾರ ಕಲ್ಪಿಸಬೇಕು ಎಂದರು.

ಸಭೆಗಳಿಗೆ ಅಧಿಕಾರಿಗಳು ಸಂಪೂರ್ಣ ಮಾಹಿತಿಯೊಂದಿಗೆ ಹಾಜರಾಗಬೇಕು. ಕೈ ಬೀಸಿಕೊಂಡು ಬರುವ ಪ್ರವೃತ್ತಿ ಬಿಡಬೇಕು. ಇಲಾಖೆಯ ಯೋಜನೆಗಳು, ಅನುದಾನ ಬಳಕೆ, ಪ್ರಗತಿ ಹಾಗೂ ಸಮಸ್ಯೆಗಳ ಬಗ್ಗೆ ಸಮಗ್ರ ಮಾಹಿತಿ ಹೊಂದಿರಬೇಕು. ಅಧಿಕಾರಿಗಳಲ್ಲಿ ಗುಣಾತ್ಮಕ ಬದಲಾವಣೆ ಅಗತ್ಯವಿದ್ದು, ಕಾರ್ಯಕ್ಷಮತೆ ಮತ್ತು ಉತ್ತರದಾಯಿತ್ವ ಹೆಚ್ಚಬೇಕು ಎಂದು ಸಂಸದರು ಹೇಳಿದರು.

ಅಮೃತ್ 2.0, ಬಹುಗ್ರಾಮ ಕುಡಿಯುವ ನೀರಿನ ಯೋಜನೆ ಸೇರಿದಂತೆ ವಿವಿಧ ಕೇಂದ್ರ ಸರ್ಕಾರಗಳ ಯೋಜನೆಗಳ ಪ್ರಗತಿ ಪರಿಶೀಲನೆ ನಡೆಸಿದ ಅವರು, ಯೋಜನೆಗಳ ಅನುಷ್ಠಾನಕ್ಕೆ ಕೇವಲ ಅನುದಾನ ಇದ್ದರಷ್ಟೆ ಸಾಕಾಗುವುದಿಲ್ಲ. ಕೆಲಸ ಮಾಡುವ ಮನಸ್ಸು ಹಾಗೂ ಸಮಾಜದ ಬಗ್ಗೆ ಕಾಳಜಿ ಇರಬೇಕು ಎಂದರು.

ಶಿಕ್ಷಣ, ಆರೋಗ್ಯ, ವಸತಿ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಕಾರ್ಯಕ್ರಮಗಳಿಗೆ ಹೆಚ್ಚಿನ ಆದ್ಯತೆ ನೀಡಬೇಕು. ಯೋಜನೆಗಳ ಲಾಭ ಜಿಲ್ಲೆಯ ಬಡವರು, ರೈತರು, ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗಗಳ ಜನರಿಗೆ ತಲುಪುವಂತೆ ನೋಡಿಕೊಳ್ಳಬೇಕು ಎಂದು ಬಸವರಾಜ ಬೊಮ್ಮಾಯಿ ಸೂಚಿಸಿದರು.

ಆಧುನಿಕ ತಂತ್ರಜ್ಞಾನ ಬಳಕೆಯಾಗುತ್ತಿದ್ದರೂ ಸಾರ್ವಜನಿಕರು ಸರ್ಕಾರಿ ಕಚೇರಿಗಳು ಮತ್ತು ಆಸ್ಪತ್ರೆಗಳಿಗೆ ಅಲೆದಾಡುವ ಪರಿಸ್ಥಿತಿ ಮುಂದುವರಿ ದಿರುವುದು ವಿಷಾದನೀಯ. ಜನರ ಕೆಲಸಗಳು ತ್ವರಿತವಾಗಿ ಆಗುವಂತೆ ಆಡಳಿತ ವ್ಯವಸ್ಥೆ ರೂಪುಗೊಳ್ಳಬೇಕು ಎಂದರು.

ಮುಂಗಾರು ಹಂಗಾಮು ಆರಂಭವಾಗಿರುವ ಹಿನ್ನೆಲೆಯಲ್ಲಿ ರೈತರಿಗೆ ಯಾವುದೇ ಕಾರಣಕ್ಕೂ ಬೀಜ ಹಾಗೂ ರಸಗೊಬ್ಬರ ಕೊರತೆಯಾಗದಂತೆ ಮುನ್ನೆಚ್ಚರಿಕೆ ಕ್ರಮ ಕೈಗೊಳ್ಳಬೇಕು ಎಂದು ಕೃಷಿ ಇಲಾಖೆಯ ಅಧಿಕಾರಿಗಳಿಗೆ ಸೂಚಿ ಸಿದ ಅವರು, ಗದಗ ಜಿಲ್ಲೆ ಕೃಷಿ ಪ್ರಧಾನ ಜಿಲ್ಲೆಯಾಗಿದ್ದು, ರೈತರಿಗೆ ಗುಣಮಟ್ಟದ ಬೀಜ ಹಾಗೂ ಅಗತ್ಯ ಪ್ರಮಾಣದ ಗೊಬ್ಬರವನ್ನು ಸಮಯಕ್ಕೆ ಸರಿಯಾಗಿ ಪೂರೈಸಬೇಕು ಎಂದರು.

ಡಿಎಪಿ ಹಾಗೂ ಯೂರಿಯಾ ಗೊಬ್ಬರಗಳಿಗೆ ಹೆಚ್ಚಿನ ಬೇಡಿಕೆ ಬರಬಹುದಾದ್ದರಿಂದ ಸರಬರಾಜು ವ್ಯವಸ್ಥೆಯಲ್ಲಿ ಯಾವುದೇ ಗೊಂದಲ ಉಂಟಾಗದಂತೆ ಕ್ರಮ ಕೈಗೊಳ್ಳಬೇಕು. ಬೇಡಿಕೆಗೆ ಅನುಗುಣವಾಗಿ ಸಹಕಾರ ಸಂಘಗಳಿಗೆ ಗೊಬ್ಬರ ಹಂಚಿಕೆ ಮಾಡಬೇಕು. ಡೀಲರ್‌ಗಳು ಅನಗತ್ಯವಾಗಿ ಗೊಬ್ಬರ ದಾಸ್ತಾನು ಮಾಡಿ ಕಾಳಸಂತೆ ಸೃಷ್ಟಿಸದಂತೆ ನಿಗಾ ವಹಿಸಬೇಕು ಎಂದು ಅಧಿಕಾರಿಗಳಿಗೆ ಬೊಮ್ಮಾಯಿ ಅವರು ಸೂಚಿಸಿದರು.

ಜಿಲ್ಲೆಯ ಅಭಿವೃದ್ಧಿಗೆ ಎಲ್ಲ ಇಲಾಖೆಗಳ ಅಧಿಕಾರಿಗಳು ಸಮನ್ವಯದಿಂದ ಕಾರ್ಯನಿರ್ವಹಿಸಬೇಕು. ಕೋವಿಡ್ ಸಂದರ್ಭದಲ್ಲಿ ತೋರಿದ ಬದ್ಧತೆ ಮತ್ತು ಸಮರ್ಪಣೆಯೊಂದಿಗೆ ಈಗಲೂ ಕೆಲಸ ಮಾಡಬೇಕು. ಯೋಜನೆಗಳ ಅನುಷ್ಠಾನದಲ್ಲಿ ಯಾವುದೇ ಸಮಸ್ಯೆಗಳಿದ್ದರೆ ವಿಳಂಬ ಮಾಡದೆ ತಮ್ಮ ಗಮನಕ್ಕೆ ತರಬೇಕು. ಅವುಗಳನ್ನು ಪರಿಹರಿಸಿ ಯೋಜನೆಗಳ ಯಶಸ್ವಿ ಅನುಷ್ಠಾನಕ್ಕೆ ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದರು.

ಸಭೆಯಲ್ಲಿ ಶಾಸಕ ಸಿ.ಸಿ. ಪಾಟೀಲ ಹಾಗೂ ಶಾಸಕ ಎಸ್.ವಿ. ಸಂಕನೂರ ಅವರು ಗದಗ-ಬೆಟಗೇರಿ ಅವಳಿ ನಗರದ ಕುಡಿಯುವ ನೀರಿನ ಸಮಸ್ಯೆ ಕುರಿತು ಸುದೀರ್ಘ ಚರ್ಚೆ ನಡೆಸಿ ಶಾಶ್ವತ ಪರಿಹಾರಕ್ಕೆ ಒತ್ತಾಯಿಸಿದರು.

ಶಾಸಕ ಡಾ. ಚಂದ್ರು ಲಮಾಣಿ ಅವರು ಲಕ್ಷ್ಮೇಶ್ವರ, ಮುಂಡರಗಿ ಹಾಗೂ ಶಿರಹಟ್ಟಿ ಭಾಗಗಳ ನಗರ ಮತ್ತು ಗ್ರಾಮೀಣ ಕುಡಿಯುವ ನೀರಿನ ಸಮಸ್ಯೆಯನ್ನು ಸಭೆಯ ಗಮನಕ್ಕೆ ತಂದು ಶೀಘ್ರ ಪರಿಹಾರಕ್ಕೆ ಆಗ್ರಹಿಸಿದರು.

ಸಭೆಯಲ್ಲಿ ತೋಟಗಾರಿಕೆ, ಕೈಗಾರಿಕೆ, ಆರೋಗ್ಯ, ಪಶು ಸಂಗೋಪನೆ, ಹೆಸ್ಕಾಂ, ವಿಕಲಚೇತನರ ಕಲ್ಯಾಣ ಸೇರಿದಂತೆ ವಿವಿಧ ಇಲಾಖೆಗಳ ಪ್ರಗತಿ ಪರಿಶೀಲನೆ ನಡೆಸಲಾಯಿತು.

ಸಭೆಯಲ್ಲಿ ಅಧಿಕಾರಿಗಳು ಈ ಮುಂದಿನಂತೆ ಮಾಹಿತಿ ವದಸಿದರು. ಗದಗ ಜಿಲ್ಲೆಯಲ್ಲಿ 2026-27ನೇ ಸಾಲಿನ ರಾಷ್ಟ್ರೀಯ ಸಾಮಾಜಿಕ ಸಹಾಯ ಕಾರ್ಯಕ್ರಮ (NSAP) ಅಡಿಯಲ್ಲಿ ವಿವಿಧ ಸಾಮಾಜಿಕ ಭದ್ರತಾ ಯೋಜನೆಗಳ ಮೂಲಕ ಒಟ್ಟು 1,16,953 ಫಲಾನುಭವಿಗಳನ್ನು ಗುರುತಿಸಲಾಗಿದ್ದು, ಅವರಿಗೆ ಡಿಬಿಟಿ (Direct Benefit Transfer) ಮೂಲಕ ಮಾಸಿಕ ಪಿಂಚಣಿ ವಿತರಿಸಲಾಗುತ್ತಿದೆ.

ಮೇ 31, 2026ರ ಅಂತ್ಯದ ಮಾಹಿತಿಯಂತೆ ವೃದ್ಧಾಪ್ಯ ವೇತನ ಯೋಜನೆಯಡಿ 51,011, ವಿಧವಾ ವೇತನ ಯೋಜನೆಯಡಿ 40,572 ಹಾಗೂ ಅಂಗವಿಕಲ ವೇತನ ಯೋಜನೆಯಡಿ 25,370 ಫಲಾನುಭವಿಗಳು ಪಿಂಚಣಿ ಪಡೆಯುತ್ತಿದ್ದಾರೆ.

ಪಿಂಚಣಿ ಯೋಜನೆಗಳಡಿ ಇಂದಿರಾ ಗಾಂಧಿ ರಾಷ್ಟ್ರೀಯ ವೃದ್ಧಾಪ್ಯ ವೇತನ (60 ರಿಂದ 64 ವರ್ಷದವರೆಗೆ ) ಯೋಜನೆಯ 12,835 ಫಲಾನುಭವಿಗಳಿಗೆ ತಿಂಗಳಿಗೆ ?600, ಇಂದಿರಾ ಗಾಂಧಿ ರಾಷ್ಟ್ರೀಯ ವಿಧವಾ ವೇತನ (65 ರಿಂದ 80 ವರ್ಷದ ವರೆಗೆ ) ಯೋಜನೆಯ 37,874 ಫಲಾನು ಭವಿಗಳಿಗೆ ?1,200 ಹಾಗೂ ಇಂದಿರಾ ಗಾಂಧಿ ರಾಷ್ಟ್ರೀಯ ಅಂಗವಿಕಲ ವೇತನ (80 ವರ್ಷ ಮೇಲ್ಪಟ್ಟು ) ಯೋಜನೆಯ 302 ಫಲಾನುಭವಿಗಳಿಗೆ ?1,200 ನೀಡಲಾಗುತ್ತಿದೆ. ಇದಲ್ಲದೆ ವಿಧವಾ ವೇತನ, ಅಂಗವಿಕಲ, ಸಂಧ್ಯಾ ಸುರಕ್ಷಾ, ಮನಸ್ವಿನಿ ಸೇರಿದಂತೆ ಜಿಲ್ಲೆಯಲ್ಲಿ ಒಟ್ಟು 1,48,961 ಫಲಾನುಭವಿಗಳಿಗೆ ವಿವಿಧ ಪಿಂಚಣಿ ಯೋಜನೆಗಳ ಸೌಲಭ್ಯ ದೊರೆಯುತ್ತಿದ್ದು, ಪ್ರತಿಮಾಹೆ ಸುಮಾರು ?15.34 ಕೋಟಿ ಪಿಂಚಣಿ ಮೊತ್ತವನ್ನು ಡಿಬಿಟಿ ಮೂಲಕ ನೇರವಾಗಿ ಫಲಾನುಭವಿಗಳ ಬ್ಯಾಂಕ್ ಖಾತೆಗಳಿಗೆ ಜಮಾ ಮಾಡಲಾಗುತ್ತಿದೆ.

ಗದಗ ಜಿಲ್ಲೆಯ ರೈತರು ಪ್ರಧಾನಮಂತ್ರಿ ಫಸಲ್ ಬಿಮಾ ಯೋಜನೆ (ಕಒಈಃಔ) ಅಡಿಯಲ್ಲಿ ಬೆಳೆ ವಿಮೆ ಮಾಡಿಸಿಕೊಳ್ಳುವಲ್ಲಿ ಮುಂಗಾರು-2025 ಹಂಗಾಮಿನಲ್ಲಿ ಜಿಲ್ಲೆಯ ಐದು ತಾಲೂಕುಗಳಲ್ಲಿ ಒಟ್ಟು 1,93,810 ರೈತರು ಬೆಳೆ ವಿಮೆ ಮಾಡಿಸಿಕೊಂಡಿದ್ದು, 2,25,976 ಹೆಕ್ಟೇರ್ ಪ್ರದೇಶ ವಿಮಾ ವ್ಯಾಪ್ತಿಗೆ ಒಳಪಟ್ಟಿದೆ. ಗದಗ ತಾಲೂಕಿನಲ್ಲಿ 50,483 ರೈತರು, ಶಿರಹಟ್ಟಿ ತಾಲೂಕಿನಲ್ಲಿ 47,785 ರೈತರು, ಮುಂಡರಗಿ ತಾಲೂಕಿನಲ್ಲಿ 25,685 ರೈತರು ಹಾಗೂ ನರಗುಂದ ತಾಲೂಕಿನಲ್ಲಿ 14,071 ರೈತರು ವಿಮೆ ಸೌಲಭ್ಯ ಪಡೆದಿದ್ದಾರೆ.

ಹಿಂಗಾರು-2025 ಹಂಗಾಮಿನಲ್ಲಿ ಒಟ್ಟು 91,438 ರೈತರು ಬೆಳೆ ವಿಮೆ ಮಾಡಿಸಿಕೊಂಡಿದ್ದಾರೆ. ಈ ಅವಧಿಯಲ್ಲಿ 1,14,793 ಹೆಕ್ಟೇರ್ ಪ್ರದೇಶ ವಿಮೆ ವ್ಯಾಪ್ತಿಗೆ ಸೇರಿದೆ. ರೋಣ ತಾಲೂಕಿನಲ್ಲಿ 31,475 ರೈತರು ಹಾಗೂ 39,069 ಹೆಕ್ಟೇರ್ ಪ್ರದೇಶದೊಂದಿಗೆ ಅಗ್ರಸ್ಥಾನದಲ್ಲಿದ್ದು, ಗದಗ ತಾಲೂಕಿನಲ್ಲಿ 27,825 ರೈತರು, ಶಿರಹಟ್ಟಿ ತಾಲೂಕಿನಲ್ಲಿ 14,343 ರೈತರು, ಮುಂಡರಗಿ ತಾಲೂಕಿನಲ್ಲಿ 12,484 ರೈತರು ಹಾಗೂ ನರಗುಂದ ತಾಲೂಕಿನಲ್ಲಿ 5,311 ರೈತರು ವಿಮೆ ಸೌಲಭ್ಯ ಪಡೆದುಕೊಂಡಿದ್ದಾರೆ.

ಗದಗ ಜಿಲ್ಲೆಯಲ್ಲಿ ಜಲ ಜೀವನ್ ಮಿಷನ್ ಯೋಜನೆಯಡಿ ಒಟ್ಟು 336 ಕಾಮಗಾರಿಗಳಿಗೆ 243.51 ಕೋಟಿ ಅನುದಾನ ಬಿಡುಗಡೆಯಾಗಿದ್ದು, ಸರಾಸರಿ 70% ಗಿಂತ ಹೆಚ್ಚು ಆರ್ಥಿಕ ಪ್ರಗತಿ ಕಾಣಲಾಗಿದೆ. ಗದಗ ತಾಲ್ಲೂಕಿನಲ್ಲಿ 78.75% ಪ್ರಗತಿಯೊಂದಿಗೆ ಅಗ್ರಸ್ಥಾನದಲ್ಲಿದ್ದರೆ, ಮುಂಡರಗಿ (70.07%), ರೋಣ (73.48%) ಹಾಗೂ ಲಕ್ಷ್ಮೇಶ್ವರ (70.36%) ಸಾಧನೆ ಮಾಡಿವೆ. ಶಿರಹಟ್ಟಿ (60.24%) ಮತ್ತು ನರಗುಂದ (61.74%) ತಾಲ್ಲೂಕುಗಳಲ್ಲೂ ಪ್ರಗತಿ ಸಾಧಿಸಲಾಗಿದೆ.

ನರೇಗಾ ಯೋಜನೆಯಡಿ ಜಿಲ್ಲೆಯಲ್ಲಿ 2025-26ನೇ ಸಾಲಿನ ಮಾರ್ಚ್ ಅಂತ್ಯದ ವೇಳೆಗೆ ಒಟ್ಟು 1,69,504 ಜಾಬ್ ಕಾರ್ಡ್ ಹೊಂದಿರುವಲ್ಲಿ 32,203 ಕುಟುಂಬಗಳು ಕೆಲಸಕ್ಕೆ ಬೇಡಿಕೆ ಸಲ್ಲಿಸಿದ್ದು, 99.32% ಮಂದಿಗೆ ಕೆಲಸ ನೀಡಲಾಗಿದೆ.

ಸಭೆಯಲ್ಲಿ ಜಿಲ್ಲಾಧಿಕಾರಿ ಸಿ ಎನ್ ಶ್ರೀಧರ್, ಎಸ್ಪಿ ರೋಹನ್ ಜಗದೀಶ್, ಡಿಸಿಎಫ್ ಸಂತೋಷ ಕುಮಾರ, ಎಡಿಸಿ ಡಾ. ದುರಗೇಶ್ ಕೆ ಆರ್, ಜಿಪಂ ಡಿಎಸ್ ಸಿ ಆರ್ ಮುಂಡರಗಿ ಸೇರಿದಂತೆ ಜಿಲ್ಲಾಮಟ್ಟದ, ತಾಲ್ಲೂಕು ಮಟ್ಟದ ಅಧಿಕಾರಿಗಳು ಹಾಜರಿದ್ದರು.

# ಸಿ.ಎಸ್. ನಾಡಗೌಡರಿಗೆ ಸಚಿವ ಸ್ಥಾನ ನೀಡಲು ಹೈಕಮಾಂಡ್‌ಗೆ ಆಗ್ರಹ: ನಿರ್ಲಕ್ಷ್ಯ ತೋರಿದರೆ ಪಕ್ಷದ ಹುದ್ದೆಗೆ ಸಾಮೂಹಿಕ ರಾಜೀನಾಮೆ ಎಚ್ಚರಿಕೆ



ಬೆಳಗಾವಿ ವಾರ್ತೆ ಮುದ್ದೇಬಿಹಾಳ: ಆರು ಬಾರಿ ಶಾಸಕರಾಗಿ ಆಯ್ಕೆಯಾಗಿರುವ, ಪಕ್ಷದ ನಿಷ್ಠಾವಂತ ಹಿರಿಯ ನಾಯಕ ಸಿ.ಎಸ್. ನಾಡಗೌಡ ಅವರಿಗೆ ಈ ಬಾರಿಯಾದರೂ ಸಂಪುಟ ದರ್ಜೆಯ ಸಚಿವ ಸ್ಥಾನ ನೀಡಬೇಕು. ಹಿಂದೆ ಮಕ್ಕಳಿಗೆ ಚಾಕೊಲೇಟ್ ನೀಡಿದಂತೆ ದೆಹಲಿ ವಿಶೇಷ ಪ್ರತಿನಿಧಿ ಅಥವಾ ನಿಗಮದ ಅಧ್ಯಕ್ಷ ಸ್ಥಾನ ನೀಡಿ ತುಪ್ಪ ಸವರಿ ಸಮಾಧಾನ ಪಡಿಸಬೇಡಿ ಎಂದು ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಗುರು ತಾರನಾಳ ಹೈಕಮಾಂಡನ್ನು ಖಾರವಾಗಿ ಆಗ್ರಹಿಸಿದ್ದಾರೆ.

ಪಟ್ಟಣದ ಪ್ರವಾಸಿ ಮಂದಿರದಲ್ಲಿ ಬುಧವಾರ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಈ ಸಂಬಂಧ ಸೋನಿಯಾ ಗಾಂಧಿ, ರಾಹುಲ್ ಗಾಂಧಿ, ಮಲ್ಲಿಕಾರ್ಜುನ ಖರ್ಗೆ, ಬಿ.ಕೆ. ಹರಿಪ್ರಸಾದ್ ಮತ್ತು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರಿಗೆ ಮನವಿ ಸಲ್ಲಿಸಲಾಗಿದೆ. ಎಸ್.ಎಂ. ಕೃಷ್ಣ ಅವರ ಅವಧಿಯಿಂದಲೂ ನಾಡಗೌಡರಿಗೆ ಸಚಿವ ಸ್ಥಾನ ತಪ್ಪುತ್ತಿದ್ದು, ಈಗಲಾದರೂ ಪಕ್ಷದ ನಿಷ್ಠೆಗೆ ಬೆಲೆ ನೀಡಬೇಕು ಎಂದು ಒತ್ತಾಯಿಸಿದರು.

**ಉಗ್ರ ಪ್ರತಿಭಟನೆ ಎಚ್ಚರಿಕೆ:**

ಮಾಜಿ ಪುರಸಭೆ ಅಧ್ಯಕ್ಷ ಮಹಿಬೂಬ್ ಗೋಳಸಂಗಿ ಮಾತನಾಡಿ, "ಸಿ.ಎಸ್. ನಾಡಗೌಡರು ಎಲ್ಲಾ ಧರ್ಮದವರಿಗೂ ಬೇಕಾದ ನಾಯಕರು. ಅವರಿಗೆ ಸಚಿವ ಸ್ಥಾನ ನೀಡದಿದ್ದಲ್ಲಿ, ಮುದ್ದೇಬಿಹಾಳ ಬಂದ್‌ಗೆ ಕರೆ ನೀಡಿ, ನಗರದ ಪ್ರಮುಖ ರಸ್ತೆಗಳಲ್ಲಿ ಟೈರ್ ಸುಟ್ಟು ಉಗ್ರ ಪ್ರತಿಭಟನೆ ನಡೆಸಲಾಗುವುದು" ಎಂದು ಎಚ್ಚರಿಕೆ ನೀಡಿದರು.

ಮಾಜಿ ಪುರಸಭೆ ಸದಸ್ಯ ಪಿಂಟು ಸಾಲಿಮನಿ ಮಾತನಾಡಿ, "ಜಾತಿ-ಧರ್ಮ ನೋಡದೆ ಪಕ್ಷಕ್ಕಾಗಿ ನಿಷ್ಠೆಯಿಂದ ದುಡಿದ ಹಿರಿಯ ನಾಯಕರಿಗೆ ಮನ್ನಣೆ ಸಿಗಬೇಕು. ಪಕ್ಷಕ್ಕಾಗಿ ದುಡಿದವರನ್ನು ಕಡೆಗಣಿಸಿ, ಪದೇ ಪದೇ ಸಚಿವ ಸ್ಥಾನ ನೀಡಿದವರನ್ನೇ ಮುಂದುವರಿಸುತ್ತಿರುವುದು ಸರಿಯಲ್ಲ" ಎಂದರು.

**ಹಣದ ಆಧಾರದ ಆಯ್ಕೆ ಸರಿಯೇ:**

ಜಿಲ್ಲಾ ಕಾಂಗ್ರೆಸ್ ಪಕ್ಷದ ಕಾರ್ಯದರ್ಶಿ ತಿಪ್ಪಣ್ಣ ದೊಡ್ಡಮನಿ ಮಾತನಾಡಿ, ಕಾಂಗ್ರೆಸ್ ಪಕ್ಷದ 136 ಶಾಸಕರಲ್ಲಿ ಎಲ್ಲರೂ ಸಚಿವ ಸ್ಥಾನಕ್ಕೆ ಅರ್ಹರಿದ್ದಾರೆ. ಸಚಿವ ಸ್ಥಾನ ಹಣದಿಂದ ಆಯ್ಕೆ ನಡೆಯುತ್ತದೆಯೋ ಅಥವಾ ಹಿರಿಯತನದ ಆಧಾರದ ಮೇಲೆ ಆಯ್ಕೆ ನಡೆಯುತ್ತದೆಯೋ ಎಂಬುದನ್ನು ಹೈಕಮಾಂಡ್ ಸ್ಪಷ್ಟಪಡಿಸಬೇಕು. ಜಿಲ್ಲೆಯವರಿಗೆ ಮತ್ತೆ ಮತ್ತೆ ಸ್ಥಾನ ನೀಡುವುದು ಎಷ್ಟು ಸರಿ? ನಿರಂತರವಾಗಿ ಎಂ.ಬಿ. ಪಾಟೀಲ್ ಅವರಿಗೆ ಮಂತ್ರಿ ಸ್ಥಾನ ನೀಡಲಾಗುತ್ತಿದೆ, ಹಣ ಕೊಟ್ಟರೆ ಮಾತ್ರ ಮಂತ್ರಿ ಮಾಡುತ್ತೀರಾ? ಸಿ.ಎಸ್. ನಾಡಗೌಡರಿಗೆ ಸಚಿವ ಸ್ಥಾನ ನೀಡದಿದ್ದರೆ ಪಕ್ಷದ ಹುದ್ದೆಗೆ ಕಾರ್ಯಕರ್ತರು ಸಾಮೂಹಿಕ ರಾಜೀನಾಮೆ ನೀಡುತ್ತೇವೆ" ಎಂದು ಎಚ್ಚರಿಸಿದರು.

ಮಹಿಳಾ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷೆ ಅಕ್ಷತಾ ಶರಣಬಸು ಚಲವಾದಿ ಮಾತನಾಡಿ, "ಚಿಮ್ಮಲಗಿ ಏತನೀರಾವರಿ, ನಾಗರಬೆಟ್ಟ ಏತನೀರಾವರಿ, ಬೂದಿಹಾಳ ಪೀರಾಪುರ ಸೇರಿದಂತೆ ಕ್ಷೇತ್ರದಲ್ಲಿ ಅಪಾರ ಅಭಿವೃದ್ಧಿ ಕೆಲಸಗಳನ್ನು ಮಾಡಿರುವ ಪ್ರಾಮಾಣಿಕ ನಾಯಕ ಸಿ.ಎಸ್. ನಾಡಗೌಡ ಅವರಿಗೆ ಸಚಿವ ಸ್ಥಾನ ನೀಡಲೇಬೇಕು" ಎಂದು ಆಗ್ರಹಿಸಿದರು.

ಈ ವೇಳೆ ವೈ.ಎಚ್. ವಿಜಯಕರ, ಶಿವಶಂಕರಗೌಡ ಹಿರೇಗೌಡರ, ರಾಜೇಂದ್ರ ರಾಯಗೊಂಡ, ಬುಡ್ಡೆಸಾಬ ಚಪ್ಪರಬಂದ, ಸರಸ್ವತಿ ಪೀರಾಪುರ ಅವರು ಮಾತನಾಡುತ್ತಾ, ಶಾಸಕ ಸಿ.ಎಸ್. ನಾಡಗೌಡ ಅವರಿಗೆ ಸಂಪುಟ ದರ್ಜೆಯ ಸಚಿವ ಸ್ಥಾನ ನೀಡುವಂತೆ ಒಕ್ಕೊರಲಿನಿಂದ ಆಗ್ರಹಿಸಿದರು.

ಈ ಪತ್ರಿಕಾಗೋಷ್ಠಿಯಲ್ಲಿ ರಾಯನಗೌಡ ತಾತರಡ್ಡಿ, ಸತೀಶ್ ಒಸ್ವಾಲ್, ಸಂಗನಗೌಡ ಬಿರಾದಾರ (ಜಿಟಿಸಿ), ಸುರೇಶಗೌಡ ಪಾಟೀಲ ಇಂಗಳಗೇರಿ,ಗೋಪಿ ಮಡಿವಾರ,ಗುರಸ್ವಾಮಿ ಬೂದಿಹಾಳಮಠ, ಸಿ.ಜಿ. ವಿಜಯಕರ, ಶ್ರೀಕಾಂತ್ ಚಲವಾದಿ, ಸಿಂಕದರ್ ಜಾನ್ವೇಕಾರ, ಶಿವು ಶಿವಪೂರಿ,ಯಲ್ಲಪ್ಪ ಚಲವಾದಿ,ಯಲ್ಲಪ್ಪ ನಾಯಕಮಕ್ಕಳು, ಲಕ್ಷ್ಮಣ ಚವ್ಹಾಣ, ರಾಜು ನಾಯಕ, ಬಹದ್ದೂರ್ ರಾಠೋಡ, ಶರಣುಬಸು ಚಲವಾದಿ,ಅಪ್ಪು ದೇಗಿನಾಳ, ರಾಮಣ್ಣ ರಾಜನಾಳ, ಬಸವರಾಜ ಕೋಳೂರ,ರಫೀಕ ಶಿರೋಳ,ಪ್ರೀತಿ ದೇಗಿನಾಳ,

ನಿಲ್ಲಮ್ಮ ಚಲವಾದಿ,ಸುಜಾತ ಶಿಂದೆ,ಸೇರಿದಂತೆ ಕಾಂಗ್ರೆಸ್ ಪಕ್ಷದ ಮುಖಂಡರು ಹಾಗೂ ಮಹಿಳಾ ಕಾರ್ಯಕರ್ತರು ಉಪಸ್ಥಿತರಿದ್ದರು.

# ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ ಕಾರ್ಯ ಯಶಸ್ವಿಗೊಳಿಸಿ: ಡಿಸಿ ಡಾ.ಆನಂದ ಕೆ. ಅಧಿಕಾರಿಗಳಿಗೆ ಸೂಚನೆ

ಬೆಳಗಾವಿ ವಾರ್ತೆ ವಿಜಯಪುರ: ಜಿಲ್ಲೆಯಲ್ಲಿ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆಯ (ಖಖಖ) ಕಾರ್ಯವನ್ನು ಯಶಸ್ವಿಗೊಳಿಸಲು ಮತ್ತು ಆರೋಗ್ಯಯುತ ಮತದಾರರ ಪಟ್ಟಿಯನ್ನು ಅಂತಿಮಗೊಳಿಸುವಲ್ಲಿ ನಿಯಮಾನುಸಾರ ಅವಶ್ಯಕ ಕ್ರಮ ಕೈಗೊಳ್ಳಬೇಕು ಎಂದು ಜಿಲ್ಲಾಧಿಕಾರಿ ಡಾ. ಆನಂದ ಕೆ. ಅವರು ಅಧಿಕಾರಿಗಳಿಗೆ ಸೂಚಿಸಿದರು.



ನಗರದ ಜಿಲ್ಲಾ ಪಂಚಾಯತಿ ಸಭಾಂಗಣದಲ್ಲಿ ಜಿಲ್ಲೆಯಲ್ಲಿ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆಯ (ಎಸ್ ಐಆರ್) ಕುರಿತು ಜಿಲ್ಲೆಯ ಮತದಾರರ ನೋಂದಣಾಧಿಕಾರಿಗಳು ಮತ್ತು ಸಹಾಯಕ ಮತದಾರರ ನೋಂದಣಾಧಿಕಾರಿಗಳಿಗೆ ಹಮ್ಮಿಕೊಂಡಿದ್ದ ತರಬೇತಿಗೆ ಚಾಲನೆ ನೀಡಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆಯ (ಎಸ್ ಐ ಆರ್) ಕಾರ್ಯ ಜೂ. 20 ರಿಂದ ಪ್ರಾರಂಭವಾಗಲಿದ್ದು, ಅಷ್ಟರೊಳಗಾಗಿ, ಜಿಲ್ಲೆಯ ಎಲ್ಲ ಮತಗಟ್ಟೆ ಅಧಿಕಾರಿಗಳಿಗೆ ತರಬೇತಿ ನೀಡುವುದು ಅತಿ ಅವಶ್ಯಕವಾಗಿದ್ದು, ಇದರ ಪೂರ್ವಭಾವಿಯಾಗಿ ತಾಲೂಕಾವಾರು ತರಬೇತುದಾರರಿಗೆ ತರಬೇತಿಯನ್ನು ಏರ್ಪಡಿಸಲಾಗಿದೆ ಎಂದ ಅವರು, ಇಲ್ಲಿ ಪೂರ್ಣ ಪ್ರಮಾಣದ ತರಬೇತಿ ಪಡೆದುಕೊಂಡು ಪರಿಣಾಮಕಾರಿಯಾಗಿ ಮತಗಟ್ಟೆ ಅಧಿಕಾರಿಗಳಿಗೆ ತರಬೇತಿಯನ್ನು ನೀಡಬೇಕು ಎಂದರು.

2002 ರ ಮತದಾರರ ಪಟ್ಟಿಯನ್ನು 2025 ರ ಮತದಾರರ ಪಟ್ಟಿಗೆ ಮ್ಯಾಪಿಂಗ್ ಕಾರ್ಯ ಕೈಗೊಳ್ಳುವ ಕುರಿತು ಈಗಾಗಲೇ ಹಲವಾರು ಬಾರಿ ವಿಡಿಯೋ ಸಂವಾದಗಳ ಮೂಲಕ ಮತ್ತು ಸಭೆಗಳನ್ನು ಜರುಗಿಸುವುದರ ಮೂಲಕ ಮತ್ತು ಪತ್ರಗಳ ಮೂಲಕ ನಿಮಗೆ ಸೂಚಿಸಲಾಗಿದ್ದು, ಮ್ಯಾಪಿಂಗ್ ಕಾರ್ಯವು ವಿಶೇಷ ಸಮಗ್ರ ಪರಿಷ್ಕರಣೆಯಲ್ಲಿ ಅತೀ ಮಹತ್ವಾದ್ದಾಗಿದ್ದು, ಈ ನಿಟ್ಟಿಯಲ್ಲಿ ಎಲ್ಲ ಮತಗಟ್ಟೆಗಳಲ್ಲಿ ಶೇ. 90 ಕ್ಕಿಂತ ಹೆಚ್ಚಿನ ಪ್ರಗತಿ ಸಾಧಿಸಬೇಕು ಎಂದರು.

ಜಿಲ್ಲೆಯ ಎಲ್ಲ ಮತಗಟ್ಟೆ ಅಧಿಕಾರಿಗಳಿಗೆ ತರಬೇತಿ ನೀಡಲು,ಬಿಎಲ್ ಒ ಫೆಸಿಲೇಶನ್ ಕೇಂದ್ರ ಮತ್ತು ಮತದಾರರ ಫೆಸಿಲಿಟೇಶನ್ ಕೇಂದ್ರಗಳನ್ನು ಸ್ಥಾಪಿಸಲು, ರಾಜಕೀಯ ಪಕ್ಷಗಳ ಸಭೆ ಕರೆದು ಅವರಿಗೆ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆಯ ತಿಳುವಳಿಕೆ ನೀಡಬೇಕು ಎಂದರು,

ಮತಗಟ್ಟೆ ಅಧಿಕಾರಿಗಳಿಗೆ ನೀಡಿದ ಗಣತಿ ಫಾರ್ಮ್ ಗಳನ್ನು ಪೂರ್ಣ ಪ್ರಮಾಣದಲ್ಲಿ ಹಿಂದಿರಿಗಿಸಿದ ಬಗ್ಗೆ ಪರಿಶೀಲಿಸಲು ಮತ್ತು ಹಿಂದಿರುಗದ ಗಣತಿ ಫಾರ್ಮಗಳ ಕುರಿತು ವಿಚಾರಣೆಯನ್ನು ಕೈಗೊಳ್ಳಲು ಮತ್ತು ಮತದಾರರನ್ನು ಮತದಾರರ ಪಟ್ಟಿಯಿಂದ ಕೈಬಿಡುವ ಪೂರ್ವದಲ್ಲಿ ಅವಶ್ಯಕ ಎಲ್ಲ ಮುನ್ನೆಚ್ಚರಿಕೆಗಳನ್ನು ವಹಿಸಬೇಕು ಎಂದು ಜಿಲ್ಲಾಧಿಕಾರಿಗಳು ಸೂಚಿಸಿದರು.

ಜಿಲ್ಲೆಯ ಎಲ್ಲ ಮತದಾರರ ನೋಂದಣಾಧಿಕಾರಿಗಳು, ಸಹಾಯಕ ಮತದಾರರ ನೋಂದಣಾಧಿಕಾರಿಗಳು ಮತ್ತು ಮತಕ್ಷೇತ್ರದ ತರಬೇತುದಾರರಿಗೆ ಸರ್ಕಾರಿ ಬಾಲಕಿಯರ ಪದವಿ ಪೂರ್ವ ಕಾಲೇಜ್ ಉಪನ್ಯಾಸಕರಾದ ಮಹಾವೀರ ರಜಪೂತ ಹಾಗೂ ಆರ್.ಸಿ. ಹಿರೇಮಠ ಅವರು ತರಬೇತಿ ನೀಡಿದರು.

ತರಬೇತಿಯಲ್ಲಿ ಅಪರ ಜಿಲ್ಲಾಧಿಕಾರಿ ಔದ್ರಾಮ, ಮತದಾರರ ನೋಂದಣಾಧಿಕಾರಿಗಳಾದ ಮ ರಾಜಶೇಖರ ಡಂಬಳ, ವಿನಯ ಪಾಟೀಲ, ಗುರುನಾಥ ದಡ್ಡೆ, ಚಿದಾನಂದ ಗುರುಸ್ವಾಮಿ ಸೇರಿದಂತೆ ವಿಜಯಪುರ ಸಹಾಯಕ ಮತದಾರರ ನೋಂದಣಾಧಿಕಾರಿಗಳಾದ ಜಿಲ್ಲೆಯ ಎಲ್ಲ ತಹಶೀಲದಾರರು ಮತ್ತು ಮತಕ್ಷೇತ್ರದ ತರಬೇತುದಾರರು ಹಾಜರಿದ್ದರು.

# ಕೊಪ್ಪಳ ಜಿಲ್ಲೆಯ ವಸತಿ ಶಾಲೆಗಳ 7, 8 & 9ನೇ ತರಗತಿ ಖಾಲಿ ಸೀಟುಗಳ ಭರ್ತಿಗೆ ಅರ್ಜಿ ಆಹ್ವಾನ

ಬೆಳಗಾವಿ ವಾರ್ತೆ ಕೊಪ್ಪಳ: ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ (ಕೆ.ಆರ್.ಇ.ಐ.ಸ್) ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಜಿಲ್ಲೆಯ ವಿವಿಧ ವಸತಿ ಶಾಲೆಗಳಲ್ಲಿ 2026-27ನೇ ಶೈಕ್ಷಣಿಕ ಸಾಲಿಗೆ ಖಾಲಿ ಇರುವ 7ನೇ, 8ನೇ ಹಾಗೂ 9ನೇ ತರಗತಿಯ ಸೀಟುಗಳ ಭರ್ತಿಗಾಗಿ ಅರ್ಹ ಮತ್ತು ಆಸಕ್ತ ವಿದ್ಯಾರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿ ಸಲ್ಲಿಕೆ ಹಾಗೂ ಪ್ರವೇಶಾತಿಗೆ ಸಂಬಂಧಿಸಿದ ಸಂಪೂರ್ಣ ಮಾಹಿತಿಯನ್ನು ಕೊಪ್ಪಳ ಜಿಲ್ಲಾ ಆಡಳಿತದ ಅಧಿಕೃತ ವೆಬ್‌ಸೈಟ್ www.Koppal.nic.in ನಲ್ಲಿ ಪ್ರಕಟಿಸಲಾಗಿದೆ. ವೆಬ್‌ಸೈಟ್‌ನ ಮುಖಪುಟದಲ್ಲಿ "2026-27ನೇ ಸಾಲಿಗೆ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವ್ಯಾಪ್ತಿಯಲ್ಲಿರುವ ವಸತಿ ಶಾಲೆಗಳಲ್ಲಿ ಖಾಲಿ ಇರುವ 7ನೇ, 8ನೇ ಹಾಗೂ 9ನೇ ತರಗತಿಯ ಸೀಟುಗಳನ್ನು ಭರ್ತಿ ಮಾಡಿಕೊಳ್ಳುವ ಬಗ್ಗೆ" ಎಂಬ ಶೀರ್ಷಿಕೆಯಡಿ ಅಗತ್ಯ ಮಾಹಿತಿಯನ್ನು ಪಡೆಯಬಹುದಾಗಿದೆ.

ಅರ್ಹ ಮತ್ತು ಆಸಕ್ತ ವಿದ್ಯಾರ್ಥಿಗಳು ಪ್ರವೇಶಾತಿ ನಿಯಮಾವಳಿಗಳನ್ನು ಪರಿಶೀಲಿಸಿ ಜೂನ್ 30 ರೊಳಗಾಗಿ ತಮ್ಮ ಅರ್ಜಿಗಳನ್ನು ಸಲ್ಲಿಸಬೇಕು ಎಂದು ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರಾದ ಅಜ್ಜಪ್ಪ ಸೂಗಲದ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರಸಗೊಬ್ಬರ, ಬೀಜದ ದರದಲ್ಲಿ ಹೆಚ್ಚಳ ಮಾಡಿದರೆ ಪರವಾನಗಿ ರದ್ದು; ಮುದ್ದೇಬಿಹಾಳ ಕೃಷಿ ಇಲಾಖೆಯ ಖಡಕ್ ಎಚ್ಚರಿಕೆ



ಬೆಳಗಾವಿ ವಾರ್ತೆ ಮುದ್ದೇಬಿಹಾಳ: ಮುಂಗಾರು ಮಳೆ ಸಮರ್ಪಕವಾಗಿ ಆರಂಭಗೊಂಡಿದ್ದು, ರೈತರು ಬಿತ್ತನೆ ಕಾರ್ಯದಲ್ಲಿ ಮಗ್ನರಾಗಿದ್ದಾರೆ. ಈ ಸಂದರ್ಭದಲ್ಲಿ ರೈತರಿಗೆ ಯಾವುದೇ ರೀತಿಯ ತೊಂದರೆಯಾಗದಂತೆ ನೋಡಿಕೊಳ್ಳಲು ಮತ್ತು ರಸಗೊಬ್ಬರ ಹಾಗೂ ಬೀಜಗಳ ಮಾರಾಟದಲ್ಲಿ ಪಾರದರ್ಶಕತೆ ಕಾಯ್ದುಕೊಳ್ಳಲು ಕೃಷಿ ಇಲಾಖೆ ಕ್ರಮ ಕೈಗೊಂಡಿದೆ.

ಸೋಮವಾರ ಪಟ್ಟಣದ ವಿವಿಧ ಬೀಜ ಮತ್ತು ರಸಗೊಬ್ಬರ ಮಾರಾಟ ಮಳಿಗೆಗಳಿಗೆ ಹಠಾತ್ ಭೇಟಿ ನೀಡಿದ ಮುದ್ದೇಬಿಹಾಳ ಕೃಷಿ ಇಲಾಖೆಯ ಸಹಾಯಕ ನಿರ್ದೇಶಕ ಸುರೇಶ ಬಾವಿಕಟ್ಟಿ ಅವರು ದಾಸ್ತಾನು ಮತ್ತು ದರಪಟ್ಟಿಗಳನ್ನು ಪರಿಶೀಲಿಸಿದರು.

**ಮಾರಾಟಗಾರರಿಗೆ ಕಟ್ಟುನಿಟ್ಟಿನ ಸೂಚನೆ:**

ಈ ಸಂದರ್ಭದಲ್ಲಿ ಮಾತನಾಡಿದ ಅವರು, "ಸರ್ಕಾರ ನಿಗದಿಪಡಿಸಿದ ದರಕ್ಕಿಂತ ಹೆಚ್ಚಿನ ದರಕ್ಕೆ ರಸಗೊಬ್ಬರ ಅಥವಾ ಬೀಜ ಮಾರಾಟ ಮಾಡುವುದು ಕಾನೂನುಬಾಹಿರ. ಅಂತಹ ದೂರುಗಳು ಬಂದಲ್ಲಿ ಸಂಬಂಧಪಟ್ಟ ಮಾರಾಟಗಾರರ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವುದಲ್ಲದೆ, ಅವರ ಮಾರಾಟ ಪರವಾನಗಿಯನ್ನು ರದ್ದುಪಡಿಸಲಾಗುತ್ತದೆ" ಎಂದು ಎಚ್ಚರಿಸಿದರು. ರೈತರು ಮಳಿಗೆಗೆ ಬಂದಾಗ ಅವರು ಬೆಳೆಯುವ ಬೆಳೆಗೆ ಅನುಗುಣವಾದ ರಸಗೊಬ್ಬರವನ್ನು ಮಾತ್ರ ಶಿಫಾರಸು ಮಾಡಬೇಕು. ಮಾರಾಟಗಾರರು ಅನಗತ್ಯವಾಗಿ ಗೊಬ್ಬರವನ್ನು ರೈತರ ಮೇಲೆ ಹೇರಬಾರದು ಎಂದು ತಾಕೀತು ಮಾಡಿದರು.

**'ಖೇತ್ ಬಚಾವ್' ಅರಿವು:**

ರೈತರಿಗೆ 'ಖೇತ್ ಬಚಾವ್' ಆಂದೋಲನದ ಮಹತ್ವ ವಿವರಿಸಿದ ಅವರು, "ಮಣ್ಣಿನ ಆರೋಗ್ಯ ರಕ್ಷಣೆಗಾಗಿ ಅವಶ್ಯಕತೆಗೆ ಅನುಗುಣವಾಗಿ ಮಾತ್ರ ರಸಗೊಬ್ಬರಗಳನ್ನು ಬಳಸಬೇಕು. ಮಿತಿಮೀರಿದ ರಾಸಾಯನಿಕಗಳ ಬಳಕೆ ಮಣ್ಣಿನ ಫಲವತ್ತತೆಯನ್ನು ಕುಂಠಿತಗೊಳಿಸುತ್ತದೆ. ಈ ಕುರಿತು ರೈತರಿಗೆ ಸೂಕ್ತ ಮಾಹಿತಿ ನೀಡುವುದು ಮಾರಾಟಗಾರರ ಜವಾಬ್ದಾರಿ" ಎಂದರು.

**ದಾಸ್ತಾನಿಗೆ ಕೊರತೆಯಿಲ್ಲ:**

ಮುದ್ದೇಬಿಹಾಳ, ಢವಳಗಿ ಹಾಗೂ ನಾಲತವಾಡ ಸೇರಿದಂತೆ ತಾಲೂಕಿನಾದ್ಯಂತ ಅಗತ್ಯವಿರುವಷ್ಟು ಬೀಜ ಮತ್ತು ರಸಗೊಬ್ಬರದ ದಾಸ್ತಾನು ಲಭ್ಯವಿದೆ. ರೈತರು ಯಾವುದೇ ಆತಂಕಪಡುವ ಅಗತ್ಯವಿಲ್ಲ ಎಂದು ತಿಳಿಸಿದ ಅವರು, ಬಿತ್ತನೆ ಬೀಜ ಮತ್ತು ರಸಗೊಬ್ಬರ ಖರೀದಿಸುವಾಗ ಮಾರಾಟಗಾರರಿಂದ ಕಡ್ಡಾಯವಾಗಿ ಅಧಿಕೃತ ರಶೀದಿ (ಬಿಲ್) ಪಡೆಯುವಂತೆ ರೈತರಲ್ಲಿ ಮನವಿ ಮಾಡಿದರು.

ಮುಂಬರುವ ದಿನಗಳಲ್ಲಿ ತಾಲೂಕಿನಾದ್ಯಂತ ವಿಶೇಷ ತಂಡಗಳನ್ನು ರಚಿಸಿ ಮಾರಾಟ ಮಳಿಗೆಗಳ ಮೇಲೆ ನಿರಂತರ ನಿಗಾ ಇರಿಸಲಾಗುವುದು ಎಂದು ಇಲಾಖೆ ಸ್ಪಷ್ಟಪಡಿಸಿದರು.

ಈ ಸಂದರ್ಭದಲ್ಲಿ ಕೃಷಿ ಅಧಿಕಾರಿಗಳಾದ ರಾಜೇಶ್ವರಿ ನಾಡಗೌಡ, ಸೋಮನಗೌಡ ಬಿರಾದಾರ, ಮಾರಾಟಗಾರರಾದ ಶಿವಶಂಕರಗೌಡ ಹಿರೇಗೌಡರ ಸೇರಿದಂತೆ ಇಲಾಖೆಯ ಸಿಬ್ಬಂದಿ ವರ್ಗ ಮತ್ತು ರೈತರು ಸೇರಿದಂತೆ ಉಪಸ್ಥಿತರಿದ್ದರು.

# ಚವನಭಾವಿ ಗ್ರಾಮದ ಡೈಮಂಡ ಪಬ್ಲಿಕ್ ಸ್ಕೂಲ್‌ನಲ್ಲಿ ವಿಶ್ವ ಪರಿಸರ ದಿನಾಚರಣೆ



ಬೆಳಗಾವಿ ವಾರ್ತೆ ಮುದ್ದೇಬಿಹಾಳ: ತಾಲೂಕಿನ ನಾಲತವಾಡ ವಲಯದ ಚವನಭಾವಿ ಗ್ರಾಮದ ಡೈಮಂಡ ಪಬ್ಲಿಕ್ ಸ್ಕೂಲ್‌ನಲ್ಲಿ ಇತ್ತೀಚೆಗೆ ವಿಶ್ವ ಪರಿಸರ ದಿನಾಚರಣೆಯನ್ನು ಸಡಗರದಿಂದ ಆಚರಿಸಲಾಯಿತು. ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಸಹಯೋಗದಲ್ಲಿ ನಡೆದ ಈ ಕಾರ್ಯಕ್ರಮದಲ್ಲಿ ಪರಿಸರ ಸಂರಕ್ಷಣೆಯ ಕುರಿತು ಅರಿವು ಮೂಡಿಸಲಾಯಿತು. ಕಾರ್ಯಕ್ರಮವನ್ನು ಗಿಡ ನಾಟಿ ಮಾಡುವ ಮೂಲಕ ಉದ್ಘಾಟಿಸಿದ ಶಾಲೆಯ ಮುಖ್ಯೋಪಾಧ್ಯಾಯ ಶಂಕರಲಿಂಗ ನಂದಿಮಠ ಮಾತನಾಡಿ, ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯು ಗಿಡ ನಾಟಿ ಅಭಿಯಾನದ ಮೂಲಕ ಪರಿಸರದ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸುತ್ತಿರುವುದು ಶ್ಲಾಘನೀಯ. ಪೂಜ್ಯ ವೀರೇಂದ್ರ ಹೆಗ್ಗಡೆಯವರ ನುಡಿಯಂತೆ, 'ಭೂಮಿ ತಾಯಿಯನ್ನು ರಕ್ಷಿಸಿ ಮುಂದಿನ ಪೀಳಿಗೆಗೆ ವರ್ಗಾಯಿಸುವುದು' ನಮ್ಮೆಲ್ಲರ ಆದ್ಯ ಕರ್ತವ್ಯವಾಗಿದೆ" ಎಂದರು.

ಯೋಜನೆಯ ತಾಲೂಕು ಕೃಷಿ ಮೇಲ್ವಿಚಾರಕ ದೇವೇಂದ್ರ ಮಾತನಾಡಿ, "ಪರಿಸರ ದಿನಾಚರಣೆಯು ಕೇವಲ ಒಂದು ದಿನದ ಆಚರಣೆಯಾಗಬಾರದು. ಪ್ರತಿಯೊಬ್ಬರೂ ಪರಿಸರದ ಬಗ್ಗೆ ಕಾಳಜಿ ವಹಿಸಿದರೆ ಮಾತ್ರ ಸ್ವಚ್ಛ ವಾತಾವರಣ ಮತ್ತು ಸಮೃದ್ಧ ಕೃಷಿಗೆ ಪೂರಕವಾದ ಮಳೆ-ಬೆಳೆ ಕಾಣಲು ಸಾಧ್ಯ. ಶಾಲೆಗಳಲ್ಲಿ 'ಒಂದು ಮಗು ಒಂದು ಗಿಡ' ಎಂಬ ಪರಿಕಲ್ಪನೆಯನ್ನು ಅಳವಡಿಸಿಕೊಂಡು ಸಾಮೂಹಿಕವಾಗಿ ಗಿಡ ನಾಟಿ ಮಾಡಿದರೆ ಉತ್ತಮ ಪರಿಸರ ನಿರ್ಮಾಣವಾಗುತ್ತದೆ" ಎಂದು ಸಲಹೆ ನೀಡಿದರು. ಕಾರ್ಯಕ್ರಮದಲ್ಲಿ ಶಾಲೆಯ ಶಿಕ್ಷಕ ವೃಂದದವರು ವಿದ್ಯಾರ್ಥಿಗಳಿಗೆ ಪರಿಸರ ಸಂರಕ್ಷಣೆಯ ಮಹತ್ವದ ಕುರಿತು ಜಾಗೃತಿ ಮೂಡಿಸಿದರು. ಈ ಸಂದರ್ಭದಲ್ಲಿ ನವ ಕರ್ನಾಟಕ ಭ್ರಷ್ಟಾಚಾರ ನಿರ್ಮೂಲನಾ ವೇದಿಕೆ ಅಧ್ಯಕ್ಷ ಮಹಿಬೂಬು ಕುಳಗೇರಿ, ಯೋಜನೆಯ ವಲಯ ಮೇಲ್ವಿಚಾರಕ ನಾಗೇಶ್ ಎಸ್.ಕೆ., ಒಕ್ಕೂಟದ ಉಪಾಧ್ಯಕ್ಷೆ ಅಕ್ಷತಾ ಶಂಕರಲಿಂಗ ಪ್ಯಾಟಿ, ಸೇವಾ ಪ್ರತಿನಿಧಿಗಳಾದ ನೂರ್‌ಜಾನ್, ಬಶೀರಅಹಮ್ಮದ್ ಅವಟಿ, ಶಾಲೆಯ ಶಿಕ್ಷಕರು, ವಿದ್ಯಾರ್ಥಿಗಳು ಉಪಸ್ಥಿತರಿದ್ದು ಕಾರ್ಯಕ್ರಮವನ್ನು ಯಶಸ್ವಿ ಗೊಳಿಸಿದರು.

# ತರಗತಿ ನಡೆಯುತ್ತಿದ್ದಾಗಲೇ ಕುಸಿಯಿತು ಶಾಲೆಯ ಹೊರಭಾಗದ ಮೇಲ್ಚಾವಣಿ: ಭಾರಿ ಅನಾಹುತ ತಪ್ಪಿದ ಪವಾಡ

ಬೆಳಗಾವಿ ವಾರ್ತೆ ಮುದ್ದೇಬಿಹಾಳ: ತಾಲೂಕಿನ ಪಿ.ಎನ್. ಗೋನಾಳ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ತರಗತಿಗಳು ನಡೆಯುತ್ತಿದ್ದ ವೇಳೆ, ಶಾಲೆಯ ಮುಂಭಾಗದ ಹೊರಗಿನ ಮೇಲ್ಚಾವಣಿ ಇದ್ದಕ್ಕಿದ್ದಂತೆ ಕುಸಿದು ಬಿದ್ದಿದೆ. ಅದೃಷ್ಟವಶಾತ್ ಪ್ರಾಣಾಪಾಯ ಸಂಭವಿಸದೆ ಶಿಕ್ಷಕರು ಹಾಗೂ ವಿದ್ಯಾರ್ಥಿಗಳು ಪಾರಾಗಿದ್ದಾರೆ.

**ಘಟನೆಯ ವಿವರ:**

ಮಂಗಳವಾರ ಎಂದಿನಂತೆ ಶಾಲೆಯಲ್ಲಿ ಬೋಧನೆ ನಡೆಯುತ್ತಿದ್ದಾಗ, ದೊಡ್ಡ ಶಬ್ದದೊಂದಿಗೆ ಮೇಲ್ಚಾವಣಿಯ ಒಂದು ಭಾಗ ನೆಲಕ್ಕುರುಳಿದೆ. ವಿಷಯ ತಿಳಿದು ತಕ್ಷಣವೇ ವಿದ್ಯಾರ್ಥಿಗಳು ಮತ್ತು ಶಿಕ್ಷಕರು ಹೊರಗೆ ಬಂದು ನೋಡಿದಾಗ ಘಟನೆ ಬೆಳಕಿಗೆ ಬಂದಿದೆ. ಮುಖ್ಯ ಶಿಕ್ಷಕ ಎಚ್.ಆರ್. ಪತ್ತಾರ್ ಅವರು ಘಟನೆಯ ಬಗ್ಗೆ ಮಾಹಿತಿ ನೀಡಿದ್ದು, "ಯಾವುದೇ ವಿದ್ಯಾರ್ಥಿ ಅಥವಾ ಶಿಕ್ಷಕರಿಗೆ ಅಪಾಯವಾಗಿಲ್ಲ, ಎಲ್ಲರೂ ಸುರಕ್ಷಿತವಾಗಿದ್ದಾರೆ" ಎಂದು ತಿಳಿಸಿದ್ದಾರೆ. ಪಕ್ಕದ ಕೊಠಡಿಯಲ್ಲಿ ಪರೀಕ್ಷಾ ಕಾರ್ಯದಲ್ಲಿ ತೊಡಗಿದ್ದ ಶಿಕ್ಷಕ ಕೆ.ಎನ್. ಸುರಪುರ ಕೂಡ ಘಟನೆಯ ಕುರಿತು ಮಾಹಿತಿ ನೀಡಿದ್ದಾರೆ.

**ಅಧಿಕಾರಿಗಳ ಭೇಟಿ ಮತ್ತು ಕ್ರಮ:**

ಘಟನೆಯ ಮಾಹಿತಿ ತಿಳಿಯುತ್ತಿದ್ದಂತೆ ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಸಂಗನಗೌಡ ಬಿರಾದಾರ, ಕ್ಷೇತ್ರ ಶಿಕ್ಷಣಾಧಿಕಾರಿ ಬಿ.ಎಸ್. ಸಾವಳಗಿ ಹಾಗೂ ಪಿಡಿಓ ಮಲ್ಲಿಕಾರ್ಜುನ ಕೋರಿ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಕಟ್ಟಡದ ಸ್ಥಿತಿಗತಿಯ ಕುರಿತು ತಾಂತ್ರಿಕ ತಜ್ಞರು ಹಾಗೂ ಇಂಜಿನಿಯರ್‌ಗಳಿಂದ ವರದಿ ಪಡೆಯಲಾಗುವುದು ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಮುಂಜಾಗ್ರತಾ ಕ್ರಮವಾಗಿ ಶಾಲೆಯ ತರಗತಿಗಳನ್ನು ಗ್ರಾಮದ ನಿರ್ಮಾಣ ಹಂತದಲ್ಲಿರುವ ಅಂಗನವಾಡಿ ಕಟ್ಟಡಕ್ಕೆ ಸ್ಥಳಾಂತರಿಸಲಾಗಿದೆ.

**ಗ್ರಾಮಸ್ಥರ ಆರೋಪ:**

ಶಾಲೆಯ ಕಟ್ಟಡ ಅತ್ಯಂತ ಹಳೆಯದಾಗಿದ್ದು, ಕೇವಲ ಸುಣ್ಣ-ಬಣ್ಣ ಬಳಿದು ಸೌಂದರ್ಯೀಕರಣ ಮಾಡಲಾಗುತ್ತಿದೆಯೇ ಹೊರತು ಕಟ್ಟಡದ ಬಲವರ್ಧನೆಗೆ ಯಾವುದೇ ಕ್ರಮ ಕೈಗೊಂಡಿಲ್ಲ ಎಂದು ಗ್ರಾಮಸ್ಥರು ಆರೋಪಿಸಿದ್ದಾರೆ.

ಹಲವು ಕೊಠಡಿಗಳ ಸೀಲಿಂಗ್ ಉಬ್ಬಿಕೊಂಡಿದ್ದು, ಯಾವಾಗ ಬೇಕಾದರೂ ಕುಸಿಯುವ ಆತಂಕವಿದೆ ಎಂದು



ತಿಳಿಸಿದ್ದಾರೆ. ಅಲ್ಲದೆ, ಕುಡಿಯುವ ನೀರು ಮತ್ತು ಶೌಚಾಲಯದ ಕೊರತೆ ಹಾಗೂ ಅಸ್ವಚ್ಛತೆಯಿಂದ ಮಕ್ಕಳು ತೊಂದರೆ ಅನುಭವಿಸುತ್ತಿದ್ದಾರೆ ಎಂದು ಪೋಷಕರು ದೂರಿದ್ದಾರೆ.

ಈ ಸಂದರ್ಭದಲ್ಲಿ ಸಿಆರ್‌ಪಿ ಎನ್.ಬಿ. ಬಿರಾದಾರ್, ಶಿಕ್ಷಕರಾದ ಎಸ್.ಎಂ. ಕಾಶಿಣಕುಂಟಿ, ಕೆ.ಎನ್. ಸುರಪುರ, ರುದ್ರಮ್ಮ, ಎಪಿಜೆ ಅಬ್ದುಲ್ ಕಲಾಂ ಯುವ ಸೈನ್ಯದ ಪದಾಧಿಕಾರಿಗಳು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

# ಹಂಡೆವಜೀರ ಸಮಾಜದ ಜಿಲ್ಲಾ ಸಂಘಟನಾ ಕಾರ್ಯದರ್ಶಿಯಾಗಿ ಬಸವರಾಜ ಡಮನಾಳ ಆಯ್ಕೆ

ಮುದ್ದೇಬಿಹಾಳ: ಅಖಿಲ ಕರ್ನಾಟಕ ವೀರಶೈವ ಲಿಂಗಾಯತ ಹಂಡೆವಜೀರ ಸಮಾಜದ ವಿಜಯಪುರ ಜಿಲ್ಲಾ ನೂತನ ಸಂಘಟನಾ ಕಾರ್ಯದರ್ಶಿಯಾಗಿ ತಾಲೂಕಿನ ಯರಗಲ್ ಗ್ರಾಮದ ಬಸವರಾಜ ಡಮನಾಳ ಅವರು ಆಯ್ಕೆಯಾಗಿದ್ದಾರೆ.

ಈ ಕುರಿತು ಅಖಿಲ ಕರ್ನಾಟಕ ವೀರಶೈವ ಲಿಂಗಾಯತ ಹಂಡೆವಜೀರ ಸಮಾಜದ ಜಿಲ್ಲಾಧ್ಯಕ್ಷರಾದ ಪ್ರೇಮ್‌ಕುಮಾರ್ ಮ್ಯಾಗೇರಿ ಅವರು ಅಧಿಕೃತ ಆದೇಶ ಹೊರಡಿಸಿದ್ದಾರೆ. ಬಸವರಾಜ ಡಮನಾಳ ಅವರ ಸಂಘಟನಾ ಚಾತುರ್ಯ ಮತ್ತು ಸಮಾಜ ಸೇವೆಯನ್ನು ಗುರುತಿಸಿ ಈ ಜವಾಬ್ದಾರಿಯನ್ನು ನೀಡಲಾಗಿದೆ. ತಮ್ಮ ನೂತನ ಆಯ್ಕೆಯ ಬಗ್ಗೆ ಪ್ರತಿಕ್ರಿಯಿಸಿರುವ ಬಸವರಾಜ ಡಮನಾಳ, ಸಮಾಜದ ಸಂಘಟನೆಗಾಗಿ ಮತ್ತು ಸಮುದಾಯದ ಏಳಿಗೆಗಾಗಿ ಪ್ರಾಮಾಣಿಕವಾಗಿ ಶ್ರಮಿಸುವುದಾಗಿ ತಿಳಿಸಿದ್ದಾರೆ. ಅವರ ಆಯ್ಕೆಗೆ ಸಮಾಜದ ಮುಖಂಡರು ಹಾಗೂ ಬಂಧುಗಳು ಹರ್ಷ ವ್ಯಕ್ತಪಡಿಸಿದ್ದಾರೆ.

BELAGAVI VARTE Kannada Daily morning news paper Editor, Printer, Publisher and Owned by MAHESHWARI BHIMASHI BHARAMANNAVAR, 221/1A/1A/1A MAHALINGESHWAR NAGAR, NEAR BCA HOSTEL BELAGAVI KARNATAKA 591307. Printed at RAJADHANI PRINTING PRESS, CTS NO.1720/B1, SHOP NO.2 KELKARBAG, BELAGAVI, KARNATAKA - 590001